ಶನಿವಾರ,03.01.2026
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 119
Digital Varthe Kannada Daily
Volume 01 - Issue 119
Saturday 03.01.2026
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ
ಕನ್ನಡ ದಿನಪತ್ರಿಕೆ
DIGITAL VARTHE
digitalvarthe@gmail.com
www.digitalvarthe.com

## ಅಖಂಡ ಕರ್ನಾಟಕದಲ್ಲಿ ನಿಜವಾದ ಸಂವಿಧಾನದ ಆಶಯಗಳನ್ನು ಎತ್ತಿ ಹಿಡಿಯಬೇಕಿದೆ :-ನಟ ಚೇತನ್



**ದೇವನಹಳ್ಳಿ** :-ಬಾಬಾ ಸಾಹೇಬ್ ಅಂಬೇಡ್ಕರ್ ಅವರ ತತ್ವಗಳನ್ನು ಅನುಸರಿಸಿ, ಯುವಕರು ಸಾಮಾಜಿಕ ಹೋರಾಟ ಗಳಲ್ಲಿ ತೊಡಗಿಸಿಕೊಂಡು ಸಮಾನತೆ, ಶಿಕ್ಷಣ, ಕೌಶಲ್ಯ ಅಭಿವೃದ್ಧಿ ಮತ್ತು ವೈಜ್ಞಾನಿಕ ಚಿಂತ ನೆಯ ಮೂಲಕ ಬದಲಾವಣೆ ತರಬೇಕು ಎಂದು ನಟ ಚೇತನ್ ಅಹಿಂಸಾ ಹೇಳಿದರು.

ದೇವನಹಳ್ಳಿ ಪಟ್ಟಣದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಕಚೇರಿಯಲ್ಲಿ ಸಮ ಸಮಾ ಜದ ಸಮಾನತೆ ಸಭೆಯನ್ನು ಸಾರ್ವಜನಿಕ ಸಂಪರ್ಕ ಕೇಂದ್ರ ಹಾಗೂ ದಲಿತ ಒಕ್ಕೂಟದಿಂದ ಹಮ್ಮಿಕೊಂಡಿದ್ದ ವೇಳೆ ಮಾತನಾಡಿ, ಸಮಾಜದಲ್ಲಿ ಪುರುಷ ಪ್ರಧಾನ ವ್ಯವಸ್ಥೆ ಯಿಂದ ಅಸಮಾನತೆ ಉಂಟಾಗಿದೆ. ಅಸಮಾನತೆಯ ವ್ಯವಸ್ಥೆಯನ್ನು ನಾವುಗಳು ತಿದ್ದಬೇಕು.

ಅಸಮಾನತೆ, ಅನ್ಯಾಯವನ್ನು ನಿರಂತರ ವಾಗಿ ಪ್ರಶ್ನೆ ಮಾಡಬೇಕು. ಆಳುವ ಶಕ್ತಿಗಳು ಮನಸ್ಸು ಮಾಡಿದರೆ ಮಾತ್ರ ನಾವು ಅಭಿವೃದ್ಧಿ ಯಾಗಲು ಸಾಧ್ಯ. ಜನರು ರಾಜಕೀಯ ಗಟ್ಟಿತನವನ್ನು ಬೆಳಸಿಕೊಳ್ಳಬೇಕು. ಪೇರಿಯರ್, ಕ್ಯಾನ್ಸಿರಾಂ ಹಾಗೂ ನಮ್ಮ ವ್ಯಾಖ್ಯಾನ ದಲ್ಲೂ ಸಮ ಸಮಾಜ ನಿರ್ಮಾಣ ವಾಗಬೇಕೆಂಬು ವುದು ಆಗಿದೆ. ರಾಜ್ಯದ 186 ಕ್ಷೇತ್ರಗಳಲ್ಲಿ ಸಮಾ ನತೆಯ ಸಭೆಗಳನ್ನು ನಡೆಸಿ ಸಮ ಸಮಾಜ ಯಾವ ರೀತಿ ನಿರ್ಮಾಣ ಮಾಡಲು ಸಾಧ್ಯ.

ಸಮಾಜದಲ್ಲಿ ಸಮಾನತೆ ಸ್ಥಾಪಿಸಲು ಎಲ್ಲರಿಗೂ ನ್ಯಾಯ ತುರುಕು ವ್ಯವಸ್ಥೆ ಅತ್ಯಗತ್ಯ ಇದಕ್ಕಾಗಿ ನಿರಂತರ ಜಾಗೃತಿ ಚರ್ಚೆಗಳು ಮತ್ತು ಹೋರಾಟಗಳು ಪ್ರಚಲವಾಗಿರ ಬೇಕೆಂದು ದಲಿತ ಮುಖಂಡರು ಹಾಗೂ ಕಾರ್ಯಕರ್ತರಿಗೆ ಅರಿವು ಮೂಡಿಸಿದರು. ಸಾರ್ವಜನಿಕ ಸಂಪರ್ಕ ಕೇಂದ್ರ ಸಂಸ್ಥಾಪಕ ಸಹದೇಶ್ ಮಾತನಾಡಿ, ದೇಶದಲ್ಲಿ ಅಸ್ಪೃಶ್ಯತೆ ತೊಡೆದು ಹಾಕಲು ಹಾಗೂ ತಳ ಸಮುದಾಯಗಳಿಗೆ ಅಧಿಕಾರದ ಹಕ್ಕು ಪಡೆಯಲು ಅಹಿಂಸ ಚೇತನ್ ಅವರ ಸಂವಾದ ಕಾರ್ಯಕ್ರಮ ಬಹಳಷ್ಟು ಪ್ರೇರಣೆ ನೀಡಲಿದೆ ತಡವಾಗಿ ತುರ್ತಾಗಿ ಕಾರ್ಯಕ್ರಮ ಆಯೋಜನೆಯಿಂದ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕ ಸಂಪರ್ಕ ಕೇಂದ್ರದಿಂದ ಆಹ್ವಾನಿಸಲು ಕಷ್ಟ ಸಾಧ್ಯವಾಗಿದೆ ಮುಂದಿನ ದಿನಗಳಲ್ಲಿ ಮತ್ತಷ್ಟು ದೊಡ್ಡ ಮಟ್ಟದಲ್ಲಿ ಕಾರ್ಯಕ್ರಮ ಆಯೋಜಿಸಲು ಪ್ರಾಮಾಣಿಕವಾಗಿ ಶ್ರಮಿಸುತ್ತೇನೆಂದರು. ಈ ಸಂದರ್ಭದಲ್ಲಿ ಸುಮಿತ್ರ ಪ್ರಶಾಂತ್, ಯಲಿಯೂರು ಪಿಳ್ಳೇಗೌಡ, ವೆಂಕಟಸ್ವಾಮಿ, ಬೆಟ್ಟಕೋಟೆ ನಾರಾಯಣಪ್ಪ, ಸಾವಕನಹಳ್ಳಿ ಸುರೇಶ್ ಸೇರಿದಂತೆ ದಲಿತ ಪರ ಸಂಘಟನೆಯ ಕಾರ್ಯಕರ್ತರು ಉಪಸ್ಥಿತರಿದ್ದರು.

## ಸಮಾಜದ ಹಾಗೂ ದೇಶದ ಸುಧಾರಣೆ ಶಿಕ್ಷಣದಿಂದ ಮಾತ್ರ ಸಾಧ್ಯ ವೇಣುಗೋಪಾಲ್



**ದೇವನಹಳ್ಳಿ** :- ಸಮಾಜದ ಹಾಗೂ ದೇಶದ ಸುಧಾರಣೆ ಶಿಕ್ಷಣದಿಂದ ಮಾತ್ರ, ಹಾಗಾಗಿ ಶಿಕ್ಷಣಕ್ಕೆ ಪ್ರಥಮ ಆದ್ಯತೆ ನೀಡಲಾಗಿದೆ ಎಂದು ಅರುಂದತಿ ಸೇವಾ ಟ್ರಸ್ಟ್ ನ ಮಾಜಿ ಅಧ್ಯಕ್ಷ ವೇಣು ಗೋಪಾಲ್ ತಿಳಿದರು.

ದೇವನಹಳ್ಳಿ ಪಟ್ಟಣದ ಅರುಂದತಿ ಸೇವಾ ಟ್ರಸ್ಟ್ ಕಚೇರಿಯಲ್ಲಿ ಟ್ರಸ್ಟಿನ ನೂತನ ಅಧ್ಯಕ್ಷರಾಗಿ ಅಣ್ಣೇಶ್ವರ ಮುನಿರಾಜಪ್ಪ ಅವರನ್ನು ಟ್ರಸ್ಟಿನ ಸರ್ವ ಸದಸ್ಯರ ಸಮ್ಮುಖದಲ್ಲಿ ಆಯ್ಕೆ ಹಾಗೂ 2026 ನೇ ಸಾಲಿನ ಕ್ಯಾಲೆಂಡರ್ ಬಿಡುಗಡೆ, ಪತ್ರಕರ್ತ ಜಗದೀಶ್ ಅವರಿಗೆ ಸನ್ಮಾನ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿ,

ದೇವನಹಳ್ಳಿ ಮೀಸಲು ಕ್ಷೇತ್ರದಲ್ಲಿ ಬಡತನ ಹಾಗೂ ನಿರುದ್ಯೋ ಗದ ಜೊತೆಗೆ ಶಿಕ್ಷಣ ಕ್ಷೇತ್ರದಲ್ಲೂ ಕೂಡ ಹಿನ್ನಡೆಯನ್ನು ಗಮನಿಸಿದ ಆದಿ ಜಾಂಬವ ಸೇವ ಟ್ರಸ್ಟ್ ಎಲ್ಲಾ ವರ್ಗದ ಸಮುದಾಯಗಳಿಗೆ ವಿದ್ಯಾರ್ಥಿ ವೇತನ ನೀಡುವ ಮೂಲಕ ತಾಲೂಕಿನಲ್ಲಿ ಯಶಸ್ಸು ಗಳಿಸಿದೆ ಎಂದರು.

ಟ್ರಸ್ಟಿನ ನಿಕಟ ಪೂರ್ವ ಅಧ್ಯಕ್ಷ ಜಾಲಿಗೆ ಮುನಿರಾಜು ಅವರು ಮಾತನಾಡಿ, ಕಳೆದ ಹಲವು ವರ್ಷಗಳಿಂದ ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಗೆ ನಮ್ಮ ಸಂಸ್ಥೆ ಶ್ರಮಿಸುತ್ತಿದ್ದು ಸರ್ಕಾರಿ ಶಾಲೆಗಳಿಗೆ ಬ್ಯಾಂಸೆಟ್ ,ಬ್ಯಾಗ್ ಹಾಗೂ ಇನ್ನಿತರ ಪರಿಕರಗಳನ್ನು ಉಚಿತವಾಗಿ ಹಂಚಿಕೆ ಮಾಡಿಕೊಂಡು ಬರಲಾಗುತ್ತಿದೆ.

ಜನಾಂಗದ ಯುವಕ ಕರ್ನಾಟಕ ಕಾರ್ಯನಿರತ ಪತ್ರ ಕರ್ತರ ಸಂಘದ ಜಿಲ್ಲಾ ಘಟಕದ ಚುನಾವಣೆಯಲ್ಲಿ ಅತ್ಯಧಿಕ ಮತ ಗಳ ಅಂತರದಲ್ಲಿ ಗೆಲವು ಸಾಧಿಸಿದ ಜಗದೀಶ್ ಅವರಿಗೆ ಸನ್ಮಾನ ಮಾಡಿರುವುದು ಸಂತಸವಾಗಿದೆ. ನನ್ನ ಅಧಿಕಾರದ ಅವಧಿಯಲ್ಲಿ ಸರ್ವ ಸದಸ್ಯರೆಲ್ಲರನ್ನು ವಿಶ್ವಾಸಕ್ಕೆ ತೆಗೆದು ಕೊಂಡು ಸಂಸ್ಥೆಯ ಏಳಿಗೆಗೆ ಶ್ರಮಿ ಸಿರುವೆ ನೂತನ ಅಧ್ಯಕ್ಷರು ಕೂಡ ಸಂಸ್ಥೆಯ ಅಭಿವೃ ದ್ಧಿಗೆ ಶ್ರಮಿಸ ಲೆಂದು ಹಾರೈಸಿದರು. ಪುರಸಭೆ ದೇವನಹಳ್ಳಿ ಮಾಜಿ ಅಧ್ಯಕ್ಷ ನರಸಿಂಹ ಮೂರ್ತಿ, ಅರುಂದತಿ ಸೇವಾ ಟ್ರಸ್ಟ್ ನೂತನ ಅಧ್ಯಕ್ಷ ಅಣ್ಣೇಶ್ವರ ಎನ್. ಮುನಿರಾಜಪ್ಪ, ಖಜಾಂಚಿ ಎಸ್.ಎಂ. ಆನಂದ್‌ಕುಮಾರ್, ಸಹ ಕಾರ್ಯದರ್ಶಿ ಎಂ.ಹರ್ಷ ನಾಥ್, ನಿರ್ದೇಶಕರು ಕೆ.ಮಂಜುನಾಥ್, ಡಿ.ಎಂ. ,ಸಿ.ಮುನಿಕೃಷ್ಣಪ್ಪ,ಅಮರನಾರಾ ಯಣಪ್ಪ, ಎಂ.ಪಿ .ಸಿ.ಎಸ್ ಮಾಜಿ ಅಧ್ಯಕ್ಷರು, ಸಿ. ಎನ್ ಹೊಸೂರು ಅನಿಲ್ ಡಿ.ಎನ್, ಸಿ. ನಾಗೇಶ್, ಸಿ. ಶ್ರೀನಿವಾಸ್ (ಸೀನಪ್ಪಿ ),ವಿ. ಮುನಿರಾಜು ಸೇರಿದಂತೆ ಇನ್ನೂ ಅನೇಕರು ಹಾಜರಿದ್ದರು.

## ಹೊಸ ವರ್ಷದ ಸಂಭ್ರಮ: ಅಂದ್ರಹಳ್ಳಿ ಒಕ್ಕಲಿಗರ ಸಂಘದಿಂದ ಸರ್ಕಾರಿ ಮಕ್ಕಳಿಗೆ ಲಾಡು ವಿತರಣೆ



**ಪೀಣ್ಯ ದಾಸರಹಳ್ಳಿ:** ಹೊಸ ವರ್ಷದ ಸಿಹಿ ತಿನ್ನುವುದರ ಮಹತ್ವವೆಂದರೆ ಅದು ಮುಂಬರುವ ವರ್ಷದಲ್ಲಿ ಸಂತೋಷ, ಸಮೃದ್ಧಿ ಮತ್ತು ಮಾಧುರ್ಯವನ್ನು ತರುತ್ತದೆ ಮತ್ತು ವಿಶೇಷವಾಗಿ ಮುದ್ದು ಮಕ್ಕಳಿಗೆ ಹುರುಪು ಚೈತನ್ಯ ಜ್ಞಾನ ಸರ್ವಾಂಗೀಣ ವಿಕಾಸಕ್ಕೆ ನಾಂದಿ ಆಗುತ್ತದೆ ಎಂದು ಎಂ ಆರ್ ಟಿ ಕನ್ವೆನ್ಷನ್ ಮಾಲೀಕ, ಅಂದ್ರಹಳ್ಳಿ ಕಾಂಗ್ರೆಸ್ ಪ್ರಭಾವಿ ನಾಯಕ ಪ್ರಕಾಶ್ ಟಿ ಹೇಳಿದರು.

ಅವರು ಅಂದ್ರಹಳ್ಳಿ ನಿವಾಸಿಗಳ ಒಕ್ಕಲಿಗರ ಸಂಘದ ವತಿಯಿಂದ ಸರ್ಕಾರಿ ಮಾದರಿ ಪ್ರಾಥಮಿಕ ಶಾಲಾ ಮಕ್ಕಳಿಗೆ ಸಿಹಿ (ಲಾಡು) ಮತ್ತು ಕಾಂಗ್ರೆಸ್ ಹಿರಿಯ ನಾಯಕಿ ಮೇರಿಮ್ಮ ಅವರ ವತಿಯಿಂದ ಹಿರಿಯ ವೃದ್ಧರಿಗೆ ಕಂಬಳಿ ವಿತರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಸಿಹಿ, ಕಂಬಳಿ ವಿತರಿಸಿ ಮಾತನಾಡಿದ ಅವರು ಸಂಬಂಧಗಳಲ್ಲಿ ಸಿಹಿ ಹೆಚ್ಚಳದ ಸಂಕೇತ, ಹೊಸ ಆರಂಭದ ಭರವಸೆ, ಮತ್ತು ಜೀವನದ ಕಹಿ-ಸಿಹಿಗಳ ಮಿಶ್ರಣವನ್ನು ಸಮ ತೋಲನ ಗೊಳಿಸುವ ಸಂಕೇತವಾಗಿದೆ. ಇದನ್ನು ಹಿರಿಯರ ಆಶೀರ್ವಾದ ಮತ್ತು ಸಕಾರಾತ್ಮಕ ಚಿಂತನೆಯೊಂದಿಗೆ ಆಚರಿಸಲಾಗುತ್ತದೆ, ಇದರಿಂದ ಇಡೀ ವರ್ಷವು ಶಾಂತಿಯುತವಾಗಿ ಮತ್ತು ಸೌಭಾಗ್ಯದಿಂದ ಕೂಡಿರುತ್ತದೆ ಎಂದು ಅಂದ್ರಹಳ್ಳಿ ವಾರ್ಡಿನ ಸ್ಥಳಿಯ ಯುವ ಮುಖಂಡ ಕಾಂಗ್ರೆಸ್ ಪ್ರಭಲ ಆಕಾಂಕ್ಷಿ ಅಭ್ಯರ್ಥಿ ಪ್ರಕಾಶ್ ಟಿ ಮಕ್ಕಳನ್ನು ಉದ್ದೇಶಿಸಿ ಮಾತನಾ ಡಿದರು. ಅಂದ್ರಹಳ್ಳಿ ಕಾಂಗ್ರೆಸ್ ಹಿರಿಯ ನಾಯಕಿ ಮೇರಿಮ್ಮ ಮಾತನಾಡಿ ವೃದ್ಧರಿಗೆ ಕಂಬಳಿ ವಿತರಣೆ ಮಾಡುವ ಮೂಲಕ ಇಂದು ಕ್ರೀಸ್ಮಸ್ ಹಬ್ಬ ಮತ್ತು ಹೊಸ ವರ್ಷದ ಪ್ರಯುಕ್ತ ವೃದ್ಧರಿಗೆ ನಮ್ಮ ಯುವ ಮುಖಂಡ ಪ್ರಕಾಶ್ ಟಿ ಅವರು ಬಂದು ಕಂಬಳಿ ವಿತರಿಸಿದ್ದು ತುಂಬಾ ಖುಷಿ ತಂದಿದೆ ಮುಂದಿನ ದಿನಗಳಲ್ಲಿ ಪ್ರಕಾಶ್ ಅವರು ಜನ ಸೇವೆ ಮಾಡಲು ಗ್ರೇಟರ್ ಬೆಂಗಳೂರು ಸದಸ್ಯರಾಗಲಿ ಎಂದು ನೆರೆದಿದ್ದ ಜನರಿಗೆ ಮೇರಿಮ್ಮ ಮನವರಿಕೆ ಮಾಡಿ ಕೊಟ್ಟರು.

ಈ ಸಂದರ್ಭದಲ್ಲಿ ಅಂದ್ರಹಳ್ಳಿ ನಿವಾಸಿಗಳ ಒಕ್ಕಲಿಗರ ಸಂಘದ ಅಧ್ಯಕ್ಷರು, ಗೌರವಾಧ್ಯಕ್ಷರು ಉಪಾಧ್ಯಕ್ಷರು ಪ್ರದಾನ ಕಾರ್ಯದರ್ಶಿ ಹಾಗೂ ಪದಾಧಿಕಾರಿಗಳ ಸದಸ್ಯರು, ಸರ್ಕಾರಿ ಮಾದರಿ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯರು, ಶಿಕ್ಷಕ ಶಿಕ್ಷಕಿಯರು ಸಿಬ್ಬಂದಿ ವರ್ಗದವರು ವಿದ್ಯಾರ್ಥಿಗಳು ಪೋಷಕರು ಅಂದ್ರಹಳ್ಳಿಯ ಸಮಸ್ತ ನಾಗರಿಕರು ಮಹಿಳೆಯರು ಮುಂತಾದವರು ಇದ್ದರು.

## ಇಷ್ಟಲಿಂಗ,ಮನೆದೇವರು ಮುತ್ತು ಗ್ರಾಮದೇವತೆ ಪೂಜೆಯಿಂದ ದೋಷ ನಿವಾರಣೆ



ಪೀಣ್ಯದಾಸರಹಳ್ಳಿ:' ನಾವು ಜೀವನದಲ್ಲಿ ಇಷ್ಟಲಿಂಗ ಪೂಜೆ, ಮನೆದೇವರ ಪೂಜೆ, ಗ್ರಾಮ ದೇವತೆ ಪೂಜೆ ಮಾಡುವುದರ ಮೂಲಕ ದೋಷ ನಿವಾರಣೆ ಮಾಡಿಕೊಳ್ಳಬೇಕು' ಎಂದು 1008 ಜಗದ್ಗುರು ಕಾಶಿ ಜ್ಞಾನ ಮಲ್ಲಿಕಾರ್ಜುನ ವಿಶ್ವರಾಧ್ಯ ಶಿವಾಚಾರ್ಯ ತಿಳಿಸಿದರು.

ಬಾಗಲಗುಂಟೆಯ ಶ್ರೀ ಸಾಯಿ ಕಲ್ಯಾಣ ಮಂಟಪದಲ್ಲಿ ದಾಸರಹಳ್ಳಿಯ ವೀರಶೈವ ಲಿಂಗಾಯತ ಕ್ಷೇಮಾಭಿವೃದ್ಧಿ ವೇದಿಕೆ, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ದಾಸರಹಳ್ಳಿ ಘಟಕ, ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು. ದಾಸರಹಳ್ಳಿ ಘಟಕ, ಅಕ್ಕಮಹಾದೇವಿ ಮಹಿಳಾ ಸಮಾಜ ದಾಸರಹಳ್ಳಿ ಮತ್ತು ಕಾಯಕಯೋಗಿ ಸಹಕಾರ ಸಂಘದ ವತಿಯಿಂದ ಸಂಗೀತಯುಕ್ತ ಇಷ್ಟಲಿಂಗ ಮಹಾಪೂಜೆ ಮತ್ತು ಧರ್ಮ ಜನಜಾಗೃತಿ ಸಮಾರಂಭದಲ್ಲಿ ಭಕ್ತರನ್ನು ಉದ್ದೇಶಿಸಿ ಮಾತನಾಡಿದರ ಇಂದಿನ ಯುವಕರಿಗೆ ಪೂಜೆ, ಪುನಸ್ಕಾರ,ನಮ್ಮ ಸಂಸ್ಕೃತಿ, ಸಂಪ್ರದಾಯ ಸನಾತನ ಹಿಂದೂ ಸಂಸ್ಕೃತಿ ಬಗ್ಗೆ ತಿಳಿಸಬೇಕು'

ನಮ್ಮ ಸಂಸ್ಕೃತಿಯು ನಿಸರ್ಗಕ್ಕೆ ಹೊಂದಿಕೊಂಡಿದೆ. ಹಾಗಾಗಿ ನಮ್ಮ ಹೊಸ ವರ್ಷ ಯುಗಾದಿಯಾಗಿದೆ. ಆಗ ಪ್ರಕೃತಿಯಲ್ಲಿ ಬದಲಾವಣೆಯಾಗಿ ಹೊಸತನ್ನು ನೀಡುತ್ತದೆ'ಎಂದು ಮನವರಿಕೆ ಮಾಡಿದರು.

ಮೇಲಣಗವಿ ಮಠದ ಮಲಯ ಶಾಂತಮುನಿ ದೇಶಿಕೇಂದ್ರ ಶಿವಾಚಾರ್ಯ ಸ್ವಾಮಿ ಮಾತನಾಡಿ,' ಮಕ್ಕಳಲ್ಲಿ ಆಚಾರ,ವಿಚಾರ ಜೊತೆಗೆ ಸಂಸ್ಕೃತಿಯನ್ನು ಕಲಿಸಬೇಕು. ಇಷ್ಟಲಿಂಗ ಪೂಜೆ, ಶಿವನ ಆರಾಧನೆ ಮೈಗೂಡಿಸಿಕೊಳ್ಳಬೇಕು. ಸಮಾಜದ ಒಳಿತಿಗೆ ಕಾಯಕವಾಗಬೇಕು' ಎಂದರು. ವೀರಶೈವ ಲಿಂಗಾಯತ ಕ್ಷೇಮಾಭಿವೃದ್ಧಿ ವೇದಿಕೆ ದಾಸರಹಳ್ಳಿ ಘಟಕದ ಪ್ರಧಾನ ಕಾರ್ಯದರ್ಶಿ ಬಸವರಾಜಣ್ಣ, ಡಿಎಸ್ ಮ್ಯಾಕ್ಸ್ ನಿರ್ದೇಶಕ ದಯಾನಂದ್ ಬಿಎಂಟಿಸಿ ಅಧ್ಯಕ್ಷ ವಿ.ಎಸ್. ಆರಾಧ್ಯ, ಕೆ.ಎಸ್.ಐ.ಐ.ಡಿ.ಸಿ ಅಧ್ಯಕ್ಷ ನಂಜಯ್ಯ ಮಠ್, ಬೆಂಗಳೂರು ನಗರ ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ಜಿ. ಮರಿಸ್ವಾಮಿ, ವೀರಶೈವ ಮುಖಂಡರಾದ ಹರೀಶ್ ಆರಾಧ್ಯ, ಜಿ. ಮನೋಹರ್ ಮತ್ತು ಪದಾಧಿಕಾರಿಗಳು ಇದ್ದರು.

## ಬೀದಿ ಬದಿ ವ್ಯಾಪಾರಿಗಳ ವಿಭಾಗದ ಜಿಲ್ಲಾಧ್ಯಕ್ಷರಾಗಿ ಕೇಶವಮೂರ್ತಿ ಎಂ ಆಯ್ಕೆ

**ಪೀಣ್ಯ ದಾಸರಹಳ್ಳಿ** : ಮಾಜಿ ಸಚಿವ ಹಾಗೂ ಯಶವಂತಪುರ ವಿಧಾನಸಭಾ ಕ್ಷೇತ್ರದ ಶಾಸಕ ಎಸ್ ಟಿ ಸೋಮಶೇಖರ್ ಅವರ ಮಾರ್ಗದರ್ಶನ ಸಲಹೆ ಸಹಕಾರದೊಂದಿಗೆ, ಮುಖ್ಯ ಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಹಾಗೂ ರಾಜ್ಯಾಧ್ಯಕ್ಷ ಡಿಕೆ ಶಿವಕುಮಾರ್, ಮತ್ತು ಕಾಂಗ್ರೆಸ್ ಕಮಿಟಿ ಬೀದಿ ಬದಿ ವ್ಯಾಪಾರಿಗಳ ವಿಭಾಗದ ರಾಜ್ಯಾಧ್ಯಕ್ಷ ರಂಗಸ್ವಾಮಿ ನನ್ನನ್ನು ಬೆಂಗಳೂರು ಪಶ್ಚಿಮ ಜಿಲ್ಲಾ ಕಾಂಗ್ರೆಸ್ ಕಮಿಟಿ ಬೀದಿ ಬದಿ ವ್ಯಾಪಾರಿಗಳ ವಿಭಾಗದ ಜಿಲ್ಲಾಧ್ಯಕ್ಷ ರಾಗಿ ಕೇಶವಮೂರ್ತಿ ಎಂ ಆಯ್ಕೆ ಮಾಡಿದ ಶಾಸಕ ಎಸ್ ಟಿ ಸೋಮಶೇಖರ್ ಅವರು ನೂತನ ಜಿಲ್ಲಾಧ್ಯಕ್ಷ ಕೇಶವಮೂರ್ತಿ ಎಂ ಅವರಿಗೆ ನೇಮಕಾತಿ ಪ್ರಮಾಣ ಪತ್ರ ನೀಡಿ ಗೌರವಿಸಿದರು.

ಈ ಸಂದರ್ಭದಲ್ಲಿ ಬೆಂಗಳೂರು ಪಶ್ಚಿಮ ಜಿಲ್ಲಾ ಕಾಂಗ್ರೆಸ್ ಕಮಿಟಿ ಉಪಾಧ್ಯಕ್ಷ ಮಂಜುನಾಥ್ ಟ್ರಾವೆಲ್ಸ್, ಸುರೇಶ್ ಗೌಡರು, ಮಹಿಳಾ ಪ್ರಧಾನ ಕಾರ್ಯದರ್ಶಿ ಮಹಾಲಕ್ಷ್ಮಿ, ಮಹಿಳಾ ಬ್ಲಾಕ್ ಅಧ್ಯಷೆ ಚಂದ್ರಕಲಾ ಸೇರಿದಂತೆ ಕಾಂಗ್ರೆಸ್ ಮುಖಂಡರು ಮಹಿಳೆಯರು ಕಾರ್ಯಕರ್ತರು ಕೇಶವಮೂರ್ತಿ ಅಭಿಮಾನಿಗಳು ನೂತನ ಜಿಲ್ಲಾಧ್ಯಕ್ಷ ಕೇಶವಮೂರ್ತಿ ಅವರಿಗೆ ಹೂವು ಗುಚ್ಚು ನೀಡಿ ಶುಭ ಹಾರೈಸಿದರು.

## ಶ್ರೀ ಕಲ್ಯಾಣ ವೆಂಕಟರಮಣ ಸ್ವಾಮಿಗೆ ವಿಶೇಷ ಪೂಜೆ



ತಾಲೂಕಿನ ಪುರಾಣ ಪ್ರಸಿದ್ಧ ಪುಣ್ಯಕ್ಷೇತ್ರ, ಭೂ ವೈಕುಂಠವೆಂದೇ ಪ್ರಸಿದ್ಧ ವಾಗಿರುವ ಹೇಮಗಿರಿಯ ಶ್ರೀ ಕಲ್ಯಾಣ ವೆಂಕಟರಮಣ ಸ್ವಾಮಿ ಸನ್ನಿಧಿಯಲ್ಲಿ ವೈಕುಂಠ ಏಕಾದಶಿಯ ಅಂಗವಾಗಿ ವಿಶೇಷ ಪೂಜೆ ಪುರಸ್ಕಾರಗಳು ಶ್ರದ್ಧಾ ಭಕ್ತಿಯಿಂದ ನಡೆದವು. ಸಾವಿರಾರು ಭಕ್ತಾದಿಗಳು ವೈಕುಂಠ ಏಕಾದಶಿಯ ಸಂಭ್ರಮದ ಪೂಜೆಯಲ್ಲಿ ಭಾಗಿಯಾಗಿ ದೇವರ ಕೃಪೆಗೆ ಪಾತ್ರರಾದರು. ಬೃಗು ಮಹರ್ಷಿಗಳ ತಪೋಭೂಮಿಯಾಗಿರುವ ಹೇಮಗಿರಿ ಕ್ಷೇತ್ರದಲ್ಲಿ, ಬೆಟ್ಟದ ಮೇಲೆ ನೆಲೆಸಿರುವ ಶ್ರೀ ರಂಗನಾಥಸ್ವಾಮಿಯ ಶಿಲಾಮೂರ್ತಿಗೆ ವಿಶೇಷ ಪುಷ್ಪಭಿಷೇಕ ಹಾಗೂ ವಿಶೇಷ ಅಲಂಕಾರ ಮಾಡಿ ಪೂಜೆಯನ್ನು ಸಲ್ಲಿಸಿ ಲೋಕ ಕಲ್ಯಾಣಾರ್ಥವಾಗಿ ಪ್ರಾರ್ಥನೆ ನಡೆಸಲಾಯಿತು.

ಆದಿಚುಂಚನಗಿರಿಯ ಹೇಮಗಿರಿ ಶಾಖಾ ಮಠದ ಗೌರವ ಕಾರ್ಯದರ್ಶಿಗಳಾದ ಡಾ.ಜೆ. ಎನ್. ರಾಮಕೃಷ್ಣೇಗೌಡ ಅವರ ನೇತೃತ್ವದಲ್ಲಿ ಶ್ರೀ ರಂಗನಾಥ ಸ್ವಾಮಿಯ ಶಿಲಾಮೂರ್ತಿಗೆ ವಿಶೇಷ ಪೂಜೆ ಸಲ್ಲಿಸಿ ಉತ್ತರ ದ್ವಾರದಲ್ಲಿ ಶ್ರೀದೇವಿ ಭೂದೇವಿ ಸಮೇತ ನಿಂತಿರುವ ಶ್ರೀ ಕಲ್ಯಾಣ ವೆಂಕಟರಮಣ ಸ್ವಾಮಿಯ ಉತ್ಸವ ಮೂರ್ತಿಯನ್ನು ಪ್ರತಿಷ್ಠಾಪನೆ ಮಾಡಿ ಭಕ್ತರಿಗೆ ವೈಕುಂಠ ದ್ವಾರದ ಪ್ರವೇಶಕ್ಕೆ ಅವಕಾಶ ಮಾಡಿಕೊಡಲಾಯಿತು. ವೈಕುಂಠ ಏಕಾದಶಿ ಅಂಗವಾಗಿ ಪುಳಿಯೋಗರೆ, ಮೊಸರನ್ನ ಹಾಗೂ ಲಾಡು ಪ್ರಸಾದವನ್ನು ಭಕ್ತಾದಿಗಳಿಗೆ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಬಿಜಿಎಸ್ ಶಾಖಾ ಮಠದ ಕಾರ್ಯ ದರ್ಶಿಗಳಾದ ಡಾ.ಜೆ.ಎನ್. ರಾಮಕೃಷ್ಣೇಗೌಡ,ನಾಟಪಹಳ್ಳಿ ಗಂಗಾಧರ್, ಪ್ರಾಂಶುಪಾಲರಾದ ಪುನೀತ್, ಪುರೋಹಿತರಾದ ರಾಘವೇಂದ್ರ, ಪತ್ರಕರ್ತರಾದ ಲೋಕೇಶ್.ವಿ,ಬಂಡಿಹೊಳೆ ಬಿಬಿ ಕಾವಲು, ಕುಪ್ಪಹಳ್ಳಿ, ಲಕ್ಷ್ಮಿಪುರ, ಮಾಕವಳ್ಳಿ, ನಾಟನಹಳ್ಳಿ, ಬೀರವಳ್ಳಿ, ಸಾಕ್ಷಿಬೀಡು ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಭಕ್ತಾದಿಗಳು ಹೇಮಗಿರಿ ಕ್ಷೇತ್ರದಲ್ಲಿ ನಡೆದ ವೈಕುಂಠ ಏಕಾದಶಿಯ ವೈಕುಂಠ ದರ್ಶನ ಕಾರ್ಯಕ್ರಮದಲ್ಲಿ ಭಾಗವಹಿಸಿ ದೇವರ ದರ್ಶನ ಪಡೆದರು,

## ಮಲ್ಲಿಕಾರ್ಜುನ ಚಾರಿಟಬಲ್ ಟ್ರಸ್ಟ್ ವತಿಯಿಂದ ಕ್ಯಾಲೆಂಡರ್ ಬಿಡುಗಡೆ,



ಒಬ್ಬ ವ್ಯಕ್ತಿ ಶಕ್ತಿಯಾಗಿ ಬೆಳೆಯಬೇಕು ಬೆಳೆದ ನಂತರ ಶಕ್ತಿಯನ್ನು ಸಮಾಜಕ್ಕೆ ಧಾರೆ ಎರೆಯಬೇಕು ಆಗ ಮಾತ್ರ ಸಮಾಜ ಸದೃಢವಾಗಲು ಸಾಧ್ಯ ಇಂತಹ ಸದೃಢ ಸಮಾಜವನ್ನು ಕಟ್ಟುವ ಸಂಕಲ್ಪ ಮಾಡಿರುವ ಮಲ್ಲಿಕಾರ್ಜುನ್ ಅಭಿನಂದನೀಯರು ಎಂದು ಪತ್ರಕರ್ತ ಬಳ್ಳೇಕೆರೆ ಮಂಜುನಾಥ್ ಹೇಳಿದರು.

ಅವರು ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ರಸ್ತೆಯಲ್ಲಿರುವ ಮಲ್ಲಿಕಾರ್ಜುನ ಚಾರಿಟಬಲ್ ಟ್ರಸ್ಟ್ ಕಚೇರಿಯಲ್ಲಿ ನೂತನ 2026 ರ ದಿನದರ್ಶಿಕೆಯನ್ನು ಬಿಡುಗಡೆಗೊಳಿಸಿ ಇಂದು ಸಮಾಜದ ಪ್ರತಿಯೊಬ್ಬನೂ ಕೂಡ ಒಳ್ಳೆಯದನ್ನು ಹಾಗೂ ಕೆಟ್ಟದ್ದನ್ನು ಯೋಚಿಸುವ ಸಾಮರ್ಥ್ಯವನ್ನು ಪಡೆದಿದ್ದಾನೆ. ಮಲ್ಲಿಕಾರ್ಜುನ್ ಅವರು ಒಬ್ಬ ಅಧಿಕಾರಿಯಾಗಿ ತಾಲೂಕಿನ ಸರ್ವರ ಋಣವನ್ನು ತೀರಿಸುವ ಸಂಕಲ್ಪವನ್ನು ಮಾಡಿದ್ದಾರೆ. ತಾಲೂಕಿನ ಜನರ ಋಣ ಮಲ್ಲಿಕಾರ್ಜುನ್ ಮೇಲಿಲ್ಲ. ಆದರೂ ತನ್ನ ಹುಟ್ಟನ್ನೇ ಋಣ ವೆಂದು ಭಾವಿಸಿ, ಸಮಾಜ ಸೇವೆಯನ್ನು ಮಾಡುತ್ತಿದ್ದಾರೆ. ತಾಲೂಕಿನ ನೊಂದವರ ಸಹಾಯಕಷ್ಟೇ ಅಲ್ಲ ಎಲ್ಲರ ಮನೆಯ ಮಗನಂತೆ ಶುಭ ಕಾರ್ಯಗಳಿಗೂ ಕೂಡ ತೆರಳಿ ಹಾರೈಸುತ್ತಿದ್ದಾರೆ. ಇವರಿಗೆ ಜನರ ಹಾರೈಕೆಯೂ ಕೂಡ ಮುಖ್ಯವಾಗಿದ್ದು ಭಗವಂತನ ಆಶೀರ್ವಾದ ಸದಾ ಇವರ ಮೇಲಿರಲಿ ಎಂದು ಮಂಜುನಾಥ್ ಆಶಿಸಿದರು.

ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಅಖಿಲ ಭಾರತ ವೀರಶೈವ ಮಹಾಸಭಾದ ಅಧ್ಯಕ್ಷ ಸುಜೇಂದ್ರಕುಮಾರ್ ಮಾತನಾಡಿ ಸಮಾಜ ಸೇವಕ ಆರ್.ಟಿ.ಓ ಮಲ್ಲಿಕಾರ್ಜುನ್ ಅವರು ಸುಮಾರು ನಾಲ್ಕು ವರ್ಷಗಳಿಂದ ಕೃಷ್ಣರಾಜಪೇಟೆ ತಾಲೂಕಿನಲ್ಲಿ ಯಾವುದೇ ಫಲಾಪೇಕ್ಷೆ ಇಲ್ಲದೆ ನಿಸ್ವಾರ್ಥ ಸೇವೆಯಿಂದ ಜಾತಿ-ಭೇದ ತಿಳಿಯದೆ ಧ್ವನಿ ಇಲ್ಲದ ವರ್ಗದವರಿಗೆ ಧ್ವನಿಯಾಗಿ ಬಡವರಿಗೆ ದೀನದಲಿತರಿಗೆ ,ವಿದ್ಯಾರ್ಥಿಗಳಿಗೆ, ಕ್ರೀಡಾಪಟುಗಳಿಗೆ,ನೂರಾರು ದೇವಾಲಯಗಳ ಜೀರ್ಣೋದ್ಧಾರಕ್ಕೆ ನಿರಂತರವಾಗಿ ಧನ ಸಹಾಯ ನೀಡುವ ಮೂಲಕ ಮಾನವೀಯತೆ ಮೆರೆದು ಉತ್ತಮ ಸಮಾಜ ಸೇವಕ ಎಂದು ಹೆಸರುಗಳಿಸಿದ್ದಾರೆ. ಅದರ ಜೊತೆಯಲ್ಲೇ ಕಳೆದ ಒಂದು ವರ್ಷದಿಂದ ಶ್ರೀ ಮಲ್ಲಿಕಾರ್ಜುನ ಚಾರಿಟಬಲ್ ಟ್ರಸ್ಟ್ ಸ್ಥಾಪಿಸಿ ಆ ಟ್ರಸ್ಟ್ ಮೂಲಕ ಹಲವು ಮತ್ತಷ್ಟು ಸಮಾಜಮುಖಿ ಕಾರ್ಯಕ್ರಮಗಳನ್ನ ಕೈಗೊಂಡು ಸದೃಢ ಸಮಾಜಕ್ಕೆ ಹಗಲು ಇರುಳು ಶ್ರಮಿಸುತ್ತಿದ್ದಾರೆ. ಒಬ್ಬ ಸಮರ್ಥ ನಾಯಕ ಸಿಕ್ಕಿದ್ದಾರೆ ಎಂದು ತಾಲೂಕಿನ ಜನರಲ್ಲಿ ಹರ್ಷವೂ ಕೂಡ ವ್ಯಕ್ತವಾಗುತ್ತಿದೆ ಎಂದು ತಿಳಿಸಿದರು 2026ರ ಹೊಸ ವರ್ಷದ ದಿನದರ್ಶಿಕೆ ಬಿಡುಗಡೆ ಕಾರ್ಯಕ್ರಮದಲ್ಲಿ ಶ್ರೀ ಕ್ಷೇತ್ರ ಪುರ ಗ್ರಾಮದಲ್ಲಿರುವ ಮಹದೇಶ್ವರ ದೇವಾಲಯದ ವ್ಯವಸ್ಥಾಪಕ ಪ್ರಧಾನ ಅರ್ಚಕ ಬಸಪ್ಪ, ಸಮಾಜ ಸೇವಕ ಮಲ್ಲಿಕಾರ್ಜುನ್, ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಜಿಲ್ಲಾ ನಿರ್ದೇಶಕ ಯೋಗೇಶ್, ತಾ.ಪಂ.ಮಾಜಿ ಸದಸ್ಯರುಗಳಾದ ನಂಜುಂಡೇಗೌಡ, ಬಿ.ರಾಜಶೇಖರ್, ಮಾದಾಪುರ ರಾಮಕೃಷ್ಣಗೌಡ, ಹೊಳೆನರಸೀಪುರ ಪುರಸಭೆ ಅಧ್ಯಕ್ಷ ಜಗನ್ನಾಥ್, ದುಂಡು ಶೆಟ್ಟಿವಂಶಸ್ಥ ವೆಂಕಟಕೃಷ್ಣಶೆಟ್ಟಿ, ನಿವೃತ್ತ ಪ್ರಾಂಶುಪಾಲ ಕೆ. ಕಾಳೇಗೌಡ, ಪುರಸಭೆ ಮಾಜಿ ಸದಸ್ಯ ಕೆ.ಆರ್.ನೀಲಕಂಠ, ಜನಜಾಗೃತಿ ಜಿಲ್ಲಾ ಉಪಾಧ್ಯಕ್ಷೆ ನಳಿನಿ, ನಿವೃತ್ತ ಪೊಲೀಸ್ ಅಧಿಕಾರಿ ಶಂಕರಲಿಂಗೇಗೌಡ, ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಯ ಯೋಜನಾಧಿಕಾರಿಗಳಾದ ತಿಲಕ್ ರಾಜ್, ಪ್ರಸಾದ್, ಮಲ್ಲಿಕಾರ್ಜುನ್ ಆಪ್ತ ಸಹಾಯಕ ಗಂಜಗೆರೆ ಮಹೇಶ್, ಸೇರಿದಂತೆ ಹಲವರು ಉಪಸ್ಥಿತರಿದ್ದರು.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ಶಾಸಕ ಸುರೇಶ್ ಕುಮಾರ್ ಸೈಕಲ್ ಸಾಹಸಕ್ಕೆ ಪ್ರಧಾನಿ ಮೋದಿ ಫಿದಾ
# ಫೋನ್ ಕರೆ ಮಾಡಿ ಅಭಿನಂದಿಸಿದ ನಮೋ

**ನವದೆಹಲಿ:** ರಾಜಕಾರಣಿಗಳೆಂದರೆ ಐಷಾರಾಮಿ ಕಾರುಗಳಲ್ಲಿ ಓಡಾಡುವವರು ಎಂಬ ಕಾಲದಲ್ಲಿ, ಬೆಂಗಳೂರಿನ ರಾಜಾಜಿನಗರ ಶಾಸಕ ಹಾಗೂ ಮಾಜಿ ಸಚಿವ ಎಸ್. ಸುರೇಶ್ ಕುಮಾರ್ ಅವರು ಹೊಸ ಇತಿಹಾಸ ಬರೆದಿದ್ದಾರೆ. ಬೆಂಗಳೂರಿನಿಂದ ಕನ್ಯಾಕುಮಾರಿಯವರೆಗೆ ಬರೋಬ್ಬರಿ 702 ಕಿಲೋಮೀಟರ್ ಸೈಕಲ್ ಯಾತ್ರೆ ನಡೆಸಿದ ಇವರ ಸಾಹಸವನ್ನು ಸ್ವತಃ ಪ್ರಧಾನಿ ನರೇಂದ್ರ ಮೋದಿ ಅವರು ಮುಕ್ತಕಂಠದಿಂದ ಶ್ಲಾಘಿಸಿದ್ದಾರೆ. ಶಾಸಕ ಸುರೇಶ್ ಕುಮಾರ್ ಅವರಿಗೆ ಖುದ್ದಾಗಿ ಫೋನ್ ಕರೆ ಮಾಡಿದ ಪ್ರಧಾನಿ ಮೋದಿ, ಅವರ ದೈಹಿಕ ಕ್ಷಮತೆ ಮತ್ತು ದೃಢ ಮನೋಭಾವವನ್ನು ಅಭಿನಂದಿಸಿದ್ದಾರೆ. ಈ ಕುರಿತು ತಮ್ಮ 'ಎಕ್ಸ್' (ಟ್ವಿಟ್ಟರ್) ಖಾತೆಯಲ್ಲಿ ಪೋಸ್ಟ್ ಹಂಚಿಕೊಂಡಿರುವ ಮೋದಿ,



ಬೆಂಗಳೂರಿನಿಂದ ಕನ್ಯಾಕುಮಾರಿಯವರೆಗೆ ಸೈಕಲ್ ಸವಾರಿ ಕೈಗೊಂಡ ಸುರೇಶ್ ಕುಮಾರ್ ಅವರ ಸಾಧನೆ ಸ್ಫೂರ್ತಿದಾಯಕ. ಆರೋಗ್ಯದ ಸವಾಲುಗಳನ್ನು ಮೆಟ್ಟಿ ನಿಂತು ಅವರು ಈ ಸಾಧನೆ ಮಾಡಿರುವುದು ಅವರ ಅಚಲ ಮನೋಭಾವವನ್ನು ತೋರಿಸುತ್ತದೆ. ಇದು ಫಿಟ್ನೆಸ್ ಕುರಿತು ದೇಶಕ್ಕೆ ದೊಡ್ಡ ಸಂದೇಶ ನೀಡಿದೆ ಎಂದು ಎಕ್ಸ್‌ನಲ್ಲಿ ಬರೆದುಕೊಂಡಿದ್ದಾರೆ. ಸುರೇಶ್ ಕುಮಾರ್ ಅವರು ಕೇವಲ 5 ದಿನಗಳಲ್ಲಿ 702 ಕಿಲೋಮೀಟರ್ ಕ್ರಮಿಸಿದ್ದಾರೆ. ಇದು ಸಾಮಾನ್ಯ ಸವಾರಿಯಲ್ಲ; 51 ವರ್ಷಗಳ ಸುದೀರ್ಘ ಬಿಡುವಿನ ನಂತರ ಅವರು ಮತ್ತೆ ವಿವೇಕಾನಂದ ಶಿಲಾ ಸ್ಮಾರಕದವರೆಗೆ ಸೈಕಲ್ ಯಾತ್ರೆ ಕೈಗೊಂಡಿರುವುದು ವಿಶೇಷ. 2025ರ ಸಾಲಿನಲ್ಲಿ ಅವರ ತಂಡ ಒಟ್ಟಾರೆಯಾಗಿ 8,000 ಕಿ.ಮೀ. ಸೈಕ್ಲಿಂಗ್ ಮಾಡಿರುವ ಮಾಹಿತಿಯನ್ನು ಕೇಳಿ ಪ್ರಧಾನಿಗಳು ಅಚ್ಚರಿ ವ್ಯಕ್ತಪಡಿಸಿದ್ದಾರೆ.

ಕೆಲವು ಕಾಲದ ಹಿಂದೆ ತೀವ್ರ ಅನಾರೋಗ್ಯಕ್ಕೆ ತುತ್ತಾಗಿದ್ದ ಸುರೇಶ್ ಕುಮಾರ್ ಅವರು, ಚಿಕಿತ್ಸೆಯ ನಂತರ ಈ ಸಾಹಸಕ್ಕೆ ಕೈಹಾಕಿದ್ದಾರೆ. ಈ ಅಂಶ ಪ್ರಧಾನಿಗಳ ಗಮನ ಸೆಳೆದಿದ್ದು, ಅನಾರೋಗ್ಯದ ನಂತರದ ಈ ಪ್ರಯತ್ನ ಶ್ಲಾಘನೀಯ ಎಂದು ಮೋದಿಯವರು ಬೆನ್ನು ತಟ್ಟಿದ್ದಾರೆ.

ಪ್ರಧಾನಿಗಳ ಕರೆಯಿಂದ ಪುಳಕಿತರಾದ ಸುರೇಶ್ ಕುಮಾರ್, ಮೋದಿಯವರು ಖುದ್ದಾಗಿ ಕರೆ ಮಾಡಿ ಅಭಿನಂದಿಸಿದ್ದು ನನ್ನ ಪುಣ್ಯ. ಇದು ನನಗೆ ಇನ್ನಷ್ಟು ಸ್ಫೂರ್ತಿ ನೀಡಿದೆ. 51 ವರ್ಷಗಳ ನಂತರ ಸ್ನೇಹಿತರೊಂದಿಗೆ ಕೈಗೊಂಡ ಈ ಯಾತ್ರೆ ನನ್ನ ಜೀವನದ ಸಾರ್ಥಕ ಕ್ಷಣಗಳಲ್ಲಿ ಒಂದು ಎಂದು ಸಂಭ್ರಮ ಹಂಚಿಕೊಂಡಿದ್ದಾರೆ.ಸುರೇಶ್ ಕುಮಾರ್ ಅವರ ಈ ಸೈಕಲ್ ಯಾತ್ರೆ ಕೇವಲ ಸಾಹಸವಲ್ಲ, ಅದು ಇಂದಿನ ಪೀಳಿಗೆಗೆ ಆರೋಗ್ಯ ಮತ್ತು ಶಿಸ್ತಿನ ಪಾಠವಾಗಿಯೂ ಹೊರಹೊಮ್ಮಿದೆ.

## ಮಗಳಿಗೆ ಕಿರುಕುಳ ನೀಡುತ್ತಿದ್ದ ಅಳಿಯನನ್ನ ರಾಡ್‌ನಿಂದ ಹೊಡೆದು ಕೊಂದ ಮಾವ

**ಶಿವಮೊಗ್ಗ:** ವಿನೋಬ ನಗರದ ಎಪಿಎಂಸಿ ತರಕಾರಿ ಮಾರುಕಟ್ಟೆ ಸಮೀಪದ ಶ್ರೀನಿಧಿ ವೈನ್ ಶಾಪ್ ಮುಂದೆ ಅರುಣ್ ಎಂಬ ಯುವಕನನ್ನು ಆತನ ಮಾವ ಮತ್ತು ಸಂಬಂಧಿಕರೇ ಸೇರಿ ರಾಡ್‌ನಿಂದ ಹೊಡೆದು ಬರ್ಬರವಾಗಿ ಹತ್ಯೆ ಮಾಡಿದ್ದಾರೆ.

ಮೃತ ಅರುಣ್ ಮತ್ತು ಯಶಸ್ವಿನಿ ಎಂಬುವವರು ಪರಸ್ಪರ ಪ್ರೀತಿಸಿ ಎರಡು ವರ್ಷಗಳ ಹಿಂದೆ ಮದುವೆಯಾಗಿದ್ದರು. ಇವರಿಬ್ಬರಿಗೂ ಒಂದು ಮಗು ಕೂಡ ಇದೆ. ಕೂಲಿ ಕೆಲಸ ಮಾಡುತ್ತಿದ್ದ ಅರುಣ್ ಆರಂಭದಲ್ಲಿ ಚೆನ್ನಾಗಿದ್ದರೂ, ದಿನಕಳೆದಂತೆ ಗಾಂಜಾ ಮತ್ತು ಮದ್ಯಪಾನವನ್ನ ಹೆಚ್ಚಾಗಿ ಮಾಡುತ್ತಿದ್ದ ಎನ್ನಲಾಗಿದೆ. ಈ ಚಟದ ಬೆನ್ನಲ್ಲೇ ಪತ್ನಿ



ಯಶಸ್ವಿನಿಗೆ ದೈಹಿಕ ಮತ್ತು ಮಾನಸಿಕ ಕಿರುಕುಳ ನೀಡಲು ಆರಂಭಿಸಿದ್ದ.

ಪತಿಯ ದೌರ್ಜನ್ಯ ತಾಳಲಾರದೆ ಯಶಸ್ವಿನಿ ಕಳೆದ ಮೂರು ತಿಂಗಳಿನಿಂದ ಮಗುವಿನೊಂದಿಗೆ ತವರು ಮನೆಯಲ್ಲಿ ಆಶ್ರಯ ಪಡೆದಿದ್ದರು. ಆದರೆ ಅರುಣ್ ಅಲ್ಲಿಗೂ ಬಿಡದೆ, ಪತ್ನಿಯ ಕುಟುಂಬಕ್ಕೆ ಕೊಲೆ ಬೆದರಿಕೆ ಹಾಕುತ್ತಿದ್ದ ಎನ್ನಲಾಗಿದೆ. ನಿಮ್ಮ ಇಡೀ ಕುಟುಂಬವನ್ನೇ ಟಾರ್ಗೆಟ್ ಮಾಡಿ ಮುಗಿಸುತ್ತೇನೆ ಎಂಬ ಅರುಣ್ ಬೆದರಿಕೆ ಹಾಕುತ್ತಿದ್ದ ಇದರಿಂದ ಪತ್ನಿ ಯಶಸ್ವಿನಿ ಮನೆಯವರು ಭಯಭೀಯ ತರಾಗಿದ್ದರು. ಬುಧವಾರ ರಾತ್ರಿ ಅರುಣ್ ವೈನ್ ಶಾಪ್ ಮುಂದೆ ನಿಂತಿದ್ದಾಗ, ಬೈಕ್‌ನಲ್ಲಿ ಬಂದ ಮಾವ ತಿಪ್ಪೇಶ್ ಮತ್ತು ಹೆಂಡತಿಯ ಸೋದರ ಮಾವ ಲೋಕೇಶ್ (ಕೆಲವು ಮೂಲಗಳ ಪ್ರಕಾರ ಪತ್ನಿಯ ತಮ್ಮ ಮಂಜುನಾಥ್) ಏಕಾಏಕಿ ದಾಳಿ ನಡೆಸಿದ್ದಾರೆ. ಕೈಯಲ್ಲಿದ್ದ ಕಬ್ಬಿಣದ ರಾಡ್‌ನಿಂದ ಅರುಣ್‌ನ ತಲೆಗೆ ಬಲವಾಗಿ ಹೊಡೆದಿದ್ದಾರೆ. ಹೊಡೆತದ ತೀವ್ರತೆಗೆ ಅರುಣ್ ಸ್ಥಳದಲ್ಲೇ ಕುಸಿದು ಬಿದ್ದು ಸಾವನ್ನಪ್ಪಿದ್ದಾನೆ.

ವಿಷಯ ತಿಳಿಯುತ್ತಿದ್ದಂತೆಯೇ ವಿನೋಬ ನಗರ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಪ್ರಾಥಮಿಕ ತನಿಖೆಯಲ್ಲಿ ಇದೊಂದು ಕೌಟುಂಬಿಕ ಕಲಹದ ಹಿನ್ನೆಲೆಯಲ್ಲಿ ನಡೆದ ಹತ್ಯೆ ಎಂದು ದೃಢಪಟ್ಟಿದೆ. ಮಗಳಿಗೆ ದೈಹಿಕವಾಗಿ ಅಲ್ಲದೆ ಮಾನಸಿಕವಾಘಿಯೂ ತೀವ್ರವಾಗಿ ಕಿರುಕುಳ ನೀಡಿ, ಹಿಂಸಿಸುತ್ತಿದ್ದ. ಇದನ್ನ ತಾಳಲಾಗದೇ ತವರು ಮನೆಗೆ ಬಂದಿದ್ದರೂ ಅಲ್ಲೂ ಬಿಡದೇ ಅಳಿಯ ಕಾಟಕೊಡುತ್ತಿದ್ದ. ಜೊತೆಗೆ ಇಡೀ ಕುಟುಂಬಕ್ಕೆ ಬೆದರಿಕೆ ಹಾಕುತ್ತಿದ್ದ ಅಳಿಯನ ಕಾಟ ಸಹಿಸಲಾಗದೇ ಮಾವ ಈ ಕೃತ್ಯ ಎಸಗಿರುವುದಾಗಿ ತಿಳಿದುಬಂದಿದೆ. ಸದ್ಯ ಆರೋಪಿಗಳನ್ನು ವಶಕ್ಕೆ ಪಡೆದಿರುವ ಪೊಲೀಸರು ಹೆಚ್ಚಿನ ವಿಚಾರಣೆ ನಡೆಸುತ್ತಿದ್ದಾರೆ.

## ನರೇಂದ್ರ ಮೋದಿ ಭೇಟಿ: ಆದಿಚುಂಚನಗಿರಿಯಲ್ಲಿ ಭೈರವೈಕ್ಯ ಶ್ರೀಗಳ ಗದ್ದುಗೆ ಉದ್ಘಾಟನೆ

**ಮಂಡ್ಯ:** ಸಕ್ಕರೆ ನಾಡು ಮಂಡ್ಯ ಜಿಲ್ಲೆಯ ಪವಿತ್ರ ಧಾರ್ಮಿಕ ಕೇಂದ್ರವಾದ ಆದಿಚುಂಚನಗಿರಿ ಶ್ರೀಕ್ಷೇತ್ರಕ್ಕೆ ಫೆಬ್ರವರಿ 23ರಂದು ಪ್ರಧಾನಿ ನರೇಂದ್ರ ಮೋದಿ ಅವರು ಭೇಟಿ ನೀಡಲಿದ್ದಾರೆ. ಈ ಐತಿಹಾಸಿಕ ಭೇಟಿಯ ವೇಳೆ ಶ್ರೀಕ್ಷೇತ್ರದಲ್ಲಿ ವಿವಿಧ ಧಾರ್ಮಿಕ ಮತ್ತು ಲೋಕಾರ್ಪಣೆ ಕಾರ್ಯಕ್ರಮಗಳಲ್ಲಿ ಪ್ರಧಾನಿ ನರೇಂದ್ರ ಮೋದಿಯವರು ಭಾಗಿಯಾಗಲಿದ್ದಾರೆ. ಮಂಡ್ಯ ಜಿಲ್ಲೆಯ ನಾಗಮಂಗಲ ತಾಲೂಕಿನಲ್ಲಿರುವ ಆದಿಚುಂಚನಗಿರಿ ಮಹಾಸಂಸ್ಥಾನ ಮಠಕ್ಕೆ ಭೇಟಿ ನೀಡಲಿರುವ ಪ್ರಧಾನಿ ಮೋದಿ, ಭೈರವೈಕ್ಯ ಪದ್ಮಭೂಷಣ ಡಾ. ಬಾಲಗಂಗಾಧರನಾಥ ಸ್ವಾಮೀಜಿಗಳ ಗದ್ದುಗೆಯನ್ನು ಅಧಿಕೃತವಾಗಿ ಉದ್ಘಾಟಿಸಲಿದ್ದಾರೆ. ಈ ಗದ್ದುಗೆಯನ್ನು ಅತ್ಯಂತ ಕಲಾತ್ಮಕವಾಗಿ ಮತ್ತು ಭವ್ಯವಾಗಿ ನಿರ್ಮಿಸಲಾಗಿದ್ದು, ಭಕ್ತಾದಿಗಳ ಪಾಲಿಗೆ ಇದು ವಿಶೇಷ ಕೇಂದ್ರವಾಗಲಿದೆ. ಅಷ್ಟೇ ಅಲ್ಲದೆ, ಆದಿಚುಂಚನಗಿರಿ ಮಠದ ಪ್ರಸ್ತುತ ಪೀಠಾಧ್ಯಕ್ಷರಾದ ಪರಮಪೂಜ್ಯ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿಗಳ ವಾರ್ಷಿಕ ಪಟ್ಟಾಭಿಷೇಕ ಮಹೋತ್ಸವದಲ್ಲಿಯೂ ಪ್ರಧಾನಿಯವರು ಪಾಲ್ಗೊಳ್ಳಲಿದ್ದಾರೆ. ಈ ಮೂಲಕ ಮಠದ ಪರಂಪರೆ ಮತ್ತು ಧಾರ್ಮಿಕ ವಿಧಿವಿಧಾನಗಳಿಗೆ ಪ್ರಧಾನಿಯವರು ಗೌರವ ಸಲ್ಲಿಸಲಿದ್ದಾರೆ.



**ಶ್ರೀಕ್ಷೇತ್ರದಲ್ಲಿ ಪ್ರಧಾನಿ ಭಾಷಣ**

ಈ ಭೇಟಿಯ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ವಿಶೇಷ ವೇದಿಕೆಯಲ್ಲಿ ಭಕ್ತಾದಿಗಳನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಶ್ರೀಕ್ಷೇತ್ರ ಆದಿಚುಂಚನಗಿರಿಯ ಸಾಮಾಜಿಕ, ಶೈಕ್ಷಣಿಕ ಮತ್ತು ಧಾರ್ಮಿಕ ಕೊಡುಗೆಗಳ ಬಗ್ಗೆ ಅವರು ಭಾಷಣ ಮಾಡಲಿದ್ದಾರೆ. ಭಾರತದ ಸಂಸ್ಕೃತಿಯಲ್ಲಿ ಮಠಗಳ ಪಾತ್ರ ಮತ್ತು ಸನಾತನ ಧರ್ಮದ ಮಹತ್ವದ ಕುರಿತು ಮೋದಿ ಅವರ ಮಾತುಗಳು ಕೇಳಿಬರಲಿವೆ.

**ಬಿಗಿ ಭದ್ರತೆ ಮತ್ತು ಸಿದ್ಧತೆ**

ಪ್ರಧಾನಿ ಭೇಟಿಯ ಹಿನ್ನೆಲೆಯಲ್ಲಿ ಮಂಡ್ಯ ಜಿಲ್ಲಾಡಳಿತ ಮತ್ತು ಪೊಲೀಸ್ ಇಲಾಖೆ ಬಿಗಿ ಭದ್ರತಾ ಸಿದ್ಧತೆಗಳನ್ನು ಆರಂಭಿಸಿದೆ. ನಾಗಮಂಗಲ ಹಾಗೂ ಚುಂಚನಗಿರಿ ಸುತ್ತಮುತ್ತ ಹೆಲಿಪ್ಯಾಡ್ ನಿರ್ಮಾಣ ಮತ್ತು ರಸ್ತೆಗಳ ದುರಸ್ತಿ ಕಾರ್ಯಕ್ಕೆ ಚಾಲನೆ ನೀಡಲಾಗಿದೆ. ಇನ್ನೇನು ಕೆಲವೇ ದಿನಗಳಲ್ಲಿ ಆದಿಚುಂಚನಗಿರಿ ಶ್ರೀಗಳು ಪ್ರಧಾನಿಯವರ ಅಧಿಕೃತ ಪ್ರವಾಸದ ವೇಳಾಪಟ್ಟಿಯನ್ನು ಅಧಿಕೃತವಾಗಿ ಪ್ರಕಟಿಸಲಿದ್ದಾರೆ.

ಈ ಭೇಟಿಯು ಕೇವಲ ಧಾರ್ಮಿಕ ಕಾರ್ಯಕ್ರಮ ಮಾತ್ರವಲ್ಲದೆ, ರಾಜಕೀಯವಾಗಿಯೂ ಮಂಡ್ಯ ಮತ್ತು ಹಳೇ ಮೈಸೂರು ಭಾಗದಲ್ಲಿ ಸಂಚಲನ ಮೂಡಿಸುವ ನಿರೀಕ್ಷೆಯಿದೆ. ಒಟ್ಟಾರೆಯಾಗಿ ಫೆಬ್ರವರಿ 23ರಂದು ಮಂಡ್ಯ ಜಿಲ್ಲೆ ವಿಶ್ವದ ಗಮನ ಸೆಳೆಯಲಿದೆ. ಮೋದಿಯವರ ಆಗಮನಕ್ಕಾಗಿ ಇಡೀ ಮಂಡ್ಯ ಜಿಲ್ಲೆ ಸಜ್ಜಾಗುತ್ತಿದೆ.

## ಕಾರ್ಯಕರ್ತನಿಗೆ ತಗುಲಿದುದು ಬುಲೆಟ್ ಅಲ್ಲ ಬ್ಯಾನರ್ ಗಲಾಟೆ ಕುರಿತು ಎಸ್‌ಪಿ ಸ್ಪಷ್ಟನೆ

**ಬಳ್ಳಾರಿ:** ಗಣಿ ನಾಡು ಬಳ್ಳಾರಿಯಲ್ಲಿ ಬ್ಯಾನರ್ ವಿವಾದದ ಹಿನ್ನೆಲೆಯಲ್ಲಿ ನಡೆದ ಕಾಂಗ್ರೆಸ್ ಕಾರ್ಯಕರ್ತನ ಸಾವು ಈಗ ಹೊಸ ತಿರುವು ಪಡೆದುಕೊಂಡಿದೆ. ಪ್ರತಿಭಟನಾಕಾರರನ್ನು ನಿಯಂತ್ರಿಸಲು ಪೊಲೀಸರು ನಡೆಸಿದ ಫೈರಿಂಗ್‌ನಿಂದ ರಾಜಶೇಖರ್ ಮೃತಪಟ್ಟಿದ್ದಾರೆ ಎಂಬ ಆರೋಪ ಕೇಳಿಬಂದಿತ್ತು. ಆದರೆ, ಇದನ್ನು ಬಳ್ಳಾರಿ ಪೊಲೀಸ್ ವರಿಷ್ಠಾಧಿಕಾರಿ (SP) ರಂಜಿತ್ ಕುಮಾರ್ ಭಂಡಾರು ಅವರು ಸ್ಪಷ್ಟವಾಗಿ ನಿರಾಕರಿಸಿದ್ದಾರೆ.

ಸುದ್ದಿಗಾರ ರೊಂದಿಗೆ ಮಾತನಾಡಿದ ಎಸ್‌ಪಿ ರಂಜಿತ್ ಕುಮಾರ್ ಭಂಡಾರು, ಮೃತ ಕಾಂಗ್ರೆಸ್ ಕಾರ್ಯಕರ್ತ ರಾಜಶೇಖರ್ ದೇಹದಿಂದ ಹೊರತೆಗೆಯಲಾದ ಬುಲೆಟ್ ಪೊಲೀಸರದ್ದಲ್ಲ. ಅದು ಯಾವುದೋ ಖಾಸಗಿ ವ್ಯಕ್ತಿಯ ರಿವಾಲ್ವರ್‌ನಿಂದ ಸಿಡಿದ ಗುಂಡು ಎಂಬುದು ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿದೆ. ನಿನ್ನೆ ಗಲಾಟೆ ತೀವ್ರ ಸ್ವರೂಪ ಪಡೆದಾಗ ಪೊಲೀಸರು ಗಾಳಿಯಲ್ಲಿ ಗುಂಡು ಹಾರಿಸಿದ್ದು ನಿಜ, ಆದರೆ ರಾಜಶೇಖರ್‌ಗೆ ತಗುಲಿರುವುದು ಖಾಸಗಿ ಆಯುಧದ ಬುಲೆಟ್ ಎಂದು ಸ್ಪಷ್ಟಪಡಿಸಿದ್ದಾರೆ. ಈ ಹೇಳಿಕೆಯು ಪ್ರಕರಣದಲ್ಲಿ ಹೊಸ ಸಂಚಲನ ಮೂಡಿಸಿದ್ದು, ಗಲಾಟೆಯ ನಡುವೆ ಕಿಡಿಗೇಡಿಗಳು ಹತ್ಯೆ ಮಾಡುವ ಉದ್ದೇಶದಿಂದಲೇ ಗುಂಡು ಹಾರಿಸಿದ್ದಾರೆಯೇ ಎಂಬ ಅನುಮಾನ ಮೂಡಿಸಿದೆ. ಈಗಾಗಲೇ ಘಟನೆ ನಡೆದ ಸ್ಥಳದ ಸುತ್ತಮುತ್ತಲಿರುವ ಸಿಸಿಟಿವಿ ಕ್ಯಾಮೆರಾಗಳ ದೃಶ್ಯಾವಳಿಗಳನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.




ಯಾರು ಗುಂಡು ಹಾರಿಸಿದ್ದಾರೆ ಎಂಬ ಬಗ್ಗೆ ನಾವು ಮಾಹಿತಿ ಸಂಗ್ರಹಿಸುತ್ತಿದ್ದೇವೆ. ಖಾಸಗಿ ವ್ಯಕ್ತಿ ಫೈರಿಂಗ್ ಮಾಡಿರುವ ಬಗ್ಗೆ ಸೂಕ್ತ ಸಾಕ್ಷ್ಯಗಳಿಗಾಗಿ ತಾಂತ್ರಿಕ ತನಿಖೆ ನಡೆಯುತ್ತಿದೆ ಎಂದು ಎಸ್‌ಪಿ ತಿಳಿಸಿದ್ದಾರೆ. ಇನ್ನು ಶಾಸಕ ನಾರಾ ಭರತ್ ರೆಡ್ಡಿ ಅವರ ಬೆಂಬಲಿಗರು ಈಗಾಗಲೇ ನಾಲ್ಕು ಪ್ರತ್ಯೇಕ ದೂರುಗಳನ್ನು ದಾಖಲಿಸಿದ್ದಾರ ಶಾಸಕ ಜನಾರ್ದನ ರೆಡ್ಡಿ ಅವರ ನಿವಾಸದ ಬಳಿ ವಾಲ್ಮೀಕಿ ಪ್ರತಿಮೆ ಅನಾವರಣದ ಬ್ಯಾನರ್ ಅಳವಡಿಸುವ ವಿಚಾರದಲ್ಲಿ ಬಿಜೆಪಿ ಮತ್ತು ಕಾಂಗ್ರೆಸ್ ಕಾರ್ಯಕರ್ತರ ನಡುವೆ ಜಟಾಪಟಿ ಆರಂಭವಾಗಿತ್ತು. ಇದು ಕೈಕೈ ಮಿಲಾಯಿಸುವ ಹಂತಕ್ಕೆ ತಲುಪಿ, ಅಂತಿಮವಾಗಿ ಗುಂಡಿನ ದಾಳಿಯಲ್ಲಿ ಓರ್ವ ಯುವಕನ ಸಾವಿನಲ್ಲಿ ಅಂತ್ಯಗೊಂಡಿತ್ತು. ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಜಿ ಸಚಿವರಾದ ಜನಾರ್ದನ ರೆಡ್ಡಿ, ಬಿ. ಶ್ರೀರಾಮುಲು, ಸೋಮಶೇಖರ್ ರೆಡ್ಡಿ ಸೇರಿದಂತೆ ಒಟ್ಟು 11 ಪ್ರಮುಖ ನಾಯಕರ ವಿರುದ್ಧ ಬ್ರೂಸ್ ಪೇಟೆ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ.

ಖಾಸಗಿ ವ್ಯಕ್ತಿಯಿಂದ ಗುಂಡೇಟು ತಗುಲಿದೆ ಎಂಬ ಮಾಹಿತಿ ಹೊರಬರುತ್ತಿದ್ದಂತೆಯೇ ನಗರದಲ್ಲಿ ಮತ್ತಷ್ಟು ಆಕ್ರೋಶ ವ್ಯಕ್ತವಾಗಿದೆ. ಯಾವುದೇ ಅಹಿತಕರ ಘಟನೆ ನಡೆಯದಂತೆ ನಗರದಾದ್ಯಂತ ಹೆಚ್ಚುವರಿ ಪೊಲೀಸ್ ಪಡೆಗಳನ್ನು ನಿಯೋಜಿಸಲಾಗಿದೆ. ಯಾರು ಅಂಬುದರ ಬಗ್ಗೆ ತನಿಖೆ ನಡೆಸಲಾಗುತ್ತಿದೆ.

## ಜನಾರ್ದನ ರೆಡ್ಡಿ ವಿರುದ್ಧ ಕೊಲೆ ಸಂಚು ರೂಪಿಸಿ ದಾಳಿ ಶ್ರೀರಾಮುಲು ಗಂಭೀರ ಆರೋಪ

**ಬಳ್ಳಾರಿ:** ನಗರ ಬಳ್ಳಾರಿಯ ಬ್ಯಾನರ್ ವಿವಾದ ಈಗ ರಾಜ್ಯ ರಾಜಕಾರಣದಲ್ಲಿ ಭಾರಿ ಸಂಚಲನ ಮೂಡಿಸಿದೆ. ಗುರುವಾರ ರಾತ್ರಿ ನಡೆದ ಘರ್ಷಣೆ ಕುರಿತು ಮಾಜಿ ಸಚಿವ ಬಿ. ಶ್ರೀರಾಮುಲು, ಶಾಸಕ ಜನಾರ್ದನ ರೆಡ್ಡಿ ಅವರ ನಿವಾಸದಲ್ಲಿ ತುರ್ತು ಸುದ್ದಿಗೋಷ್ಠಿ ನಡೆಸಿ, ಆಡಳಿತ ಪಕ್ಷದ ವಿರುದ್ಧ ಕೆಂಡಕಾರಿದ್ದಾರೆ. ನಿನ್ನೆ ನಡೆದದ್ದು ಆಕಸ್ಮಿಕವಲ್ಲ, ಅದು ಜನಾರ್ದನ ರೆಡ್ಡಿ ಅವರನ್ನು ಗುರಿಯಾಗಿಸಿಕೊಂಡು ನಡೆಸಿದ ಪೂರ್ವನಿಯೋಜಿತ ಕೃತ್ಯ ಎಂದು ಹೊಸ ಬಾಂಬ್ ಸಿಡಿಸಿದ್ದಾರೆ.



ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಶ್ರೀರಾಮುಲು, ಬ್ಯಾನರ್ ಕಟ್ಟುವ ವಿಚಾರದಲ್ಲಿ ಜಗಳ ಮಾಡಲೆಂದೇ ಒಂದು ಗುಂಪು ಪ್ಲಾನ್ ಮಾಡಿಕೊಂಡು ಬಂದಿತ್ತು. ಜನಾರ್ದನ ರೆಡ್ಡಿ ಅವರು ಸ್ಥಳಕ್ಕೆ ಬರುತ್ತಿದ್ದಂತೆಯೇ ಅವರ ಮೇಲೆ ಗುಂಡು ಹಾರಿಸಲಾಗಿದೆ. ಸತೀಶ್ ರೆಡ್ಡಿ ಎಂಬುವವರ ಬಾಡಿಗಾರ್ಡ್‌ಗಳು ಸಿನಿಮಾದಲ್ಲಿ ತೋರಿಸುವಂತೆ ಮನಬಂದಂತೆ ಫೈರಿಂಗ್ ಮಾಡಿದ್ದಾರೆ. ಈ ವೇಳೆ ಪೆಟ್ರೋಲ್ ಬಾಂಬ್ ಕೂಡ ಎಸೆಯಲಾಗಿದೆ ಎಂದು ಆರೋಪಿಸಿದರು. 1982ರ ನಂತರ ಬಳ್ಳಾರಿಯಲ್ಲಿ ಇಂತಹ ಭೀಕರ ಗೂಂಡಾಗಿರಿ ನಡೆದಿಲ್ಲ ಎಂದು ಆಕ್ರೋಶ ಹೊರಹಾಕಿದರು.

ಪ್ರಕರಣದಲ್ಲಿ ರಾಜಶೇಖರ್ ಎಂಬ ಯುವಕನ ಸಾವಿಗೆ ತೀವ್ರ ಸಂತಾಪ ಸೂಚಿಸಿದ ಶ್ರೀರಾಮುಲು, ರಾಜಶೇಖರ್ ಯಾವುದೇ ಪಕ್ಷಕ್ಕೆ ಸೇರಿರಲಿ, ಆತ ಒಬ್ಬ ಅಮಾಯಕ. ಆತನ ಸಾವು ನೋವು ತಂದಿದೆ. ಆದರೆ, ಆತನಿಗೆ ತಗುಲಿರುವುದು ಪೊಲೀಸರ ಬುಲೆಟ್ ಅಲ್ಲ, ಬದಲಾಗಿ ಖಾಸಗಿ ವ್ಯಕ್ತಿಯ ರಿವಾಲ್ವರ್ ಗುಂಡು. ಪೊಲೀಸರು ಕೂಡಲೇ ಬ್ಯಾಲಿಸ್ಟಿಕ್ ತನಿಖೆ (FSL) ನಡೆಸಿ, ಯಾವ ಗನ್‌ನಿಂದ ಗುಂಡು ಹಾರಿದೆ ಎಂಬುದನ್ನು ಪತ್ತೆಹಚ್ಚಬೇಕು. ನಮ್ಮ ಗನ್‌ಮ್ಯಾನ್ ಬಳಿಯ ಬುಲೆಟ್‌ಗಳನ್ನು ಬೇಕಾದರೆ ಲೆಕ್ಕ ಮಾಡಲಿ, ನಾವು ತನಿಖೆಗೆ ಸಿದ್ಧವಿದ್ದೇವೆ ಎಂದರು. ಶಾಸಕ ನಾರಾ ಭರತ್ ರೆಡ್ಡಿ ಅವರ ಹೆಸರನ್ನು ಉಲ್ಲೇಖಿಸಿ ಮಾತನಾಡಿದ ರಾಮುಲು, ಬಳ್ಳಾರಿಯನ್ನು ಭಸ್ಮ ಮಾಡುತ್ತೇನೆ ಎಂದು ಭರತ್ ರೆಡ್ಡಿ ಹೇಳಿದ್ದಾರೆ. ಪೆಟ್ರೋಲ್ ಬಾಂಬ್ ಅವರೇ ತಂದಿದ್ದು ಎಂಬುದಕ್ಕೆ ಅವರ ಮಾತುಗಳೇ ಸಾಕ್ಷಿ. ಸತೀಶ್ ರೆಡ್ಡಿ ಎಂಬುವವರು ಬಿಹಾರ ಮಾದರಿಯಲ್ಲಿ ಗನ್ ಹಿಡಿದು ದೌರ್ಜನ್ಯ ಮಾಡುತ್ತಿದ್ದಾರೆ. ಇಷ್ಟು ಸ್ಪೀಡ್ ಒಳ್ಳೆಯದಲ್ಲ ಭರತ್ ರೆಡ್ಡಿ, ಆಕ್ಸಿಡೆಂಟ್ ಆಗುತ್ತೆ ಎಂದು ಎಚ್ಚರಿಕೆ ನೀಡಿದರು.

ಕೇವಲ ಚುನಾವಣೆಗಾಗಿ ಶಕ್ತಿ ಪ್ರದರ್ಶನ ಇರಲಿ, ಇಂತಹ ರೌಡಿಸಂ ಬೇಡ ಎಂದು ಗುಡುಗಿದರು. ಪ್ರಕರಣದ ಸತ್ಯಾಸತ್ಯತೆ ಹೊರಬರಲು ರಾಜ್ಯ ಸರ್ಕಾರದ ತನಿಖೆಯ ಮೇಲೆ ನಮಗೆ ನಂಬಿಕೆಯಿಲ್ಲ. ಆದ್ದರಿಂದ ಈ ಪ್ರಕರಣವನ್ನು ಸಿಟ್ಟಿಂಗ್ ಹೈಕೋರ್ಟ್ ನ್ಯಾಯಾಧೀಶರಿಂದ ಅಥವಾ ಸಿಬಿಐ (CBI) ತನಿಖೆಗೆ ವಹಿಸಬೇಕು ಎಂದು ಶ್ರೀರಾಮುಲು ಒತ್ತಾಯಿಸಿದರು. ನಾವು ಎಲ್ಲಿಯೂ ಓಡಿ ಹೋಗಲ್ಲ, ನಿರೀಕ್ಷಣಾ ಜಾಮೀನು ಪಡೆಯಲ್ಲ. ನಮ್ಮ ಕಡೆಯಿಂದ ಒಂದು ಸಣ್ಣ ತಪ್ಪೂ ನಡೆದಿಲ್ಲ. ತಪ್ಪು ಮಾಡಿದವರು ಶಿಕ್ಷೆ ಅನುಭವಿಸಲೇಬೇಕು ಎಂದು ಅವರು ಸವಾಲು ಹಾಕಿದರು. ಸದ್ಯ ಬಳ್ಳಾರಿಯಲ್ಲಿ ಬಿಗುವಿನ ವಾತಾವರಣ ಮುಂದುವರಿದಿದ್ದು, ಶ್ರೀರಾಮುಲು ಅವರ ಈ ಆರೋಪಗಳು ರಾಜಕೀಯ ವಲಯದಲ್ಲಿ ಹೊಸ ಚರ್ಚೆಗೆ ನಾಂದಿ ಹಾಡಿವೆ.

## ಪಿಕಪ್ ವಾಹನ ಪಲ್ಟಿಯಾಗಿ ಸ್ಥಳದಲ್ಲೇ ಮೂವರು ದುರ್ಮರಣ



**ಹಾಸನ:** ಇಡೀ ನಾಡು ಹೊಸ ವರ್ಷದ ಸಂಭ್ರಮದಲ್ಲಿರುವಾಗಲೇ ರಾಜ್ಯದ ಹಾಸನ ಮತ್ತು ಧಾರವಾಡ ಜಿಲ್ಲೆಗಳಲ್ಲಿ ಭೀಕರ ರಸ್ತೆ ಅಪಘಾತಗಳು ಸಂಭವಿಸಿದ್ದು, ಒಟ್ಟು ನಾಲ್ವರು ಪ್ರಾಣ ಕಳೆದುಕೊಂಡಿದ್ದಾರೆ. ಹಾಸನದಲ್ಲಿ ಅಡಿಕೆ ಸಾಗಿಸುತ್ತಿದ್ದ ಪಿಕಪ್ ವಾಹನ ಪಲ್ಟಿಯಾಗಿ ಮೂವರು ಮೃತಪಟ್ಟರೆ, ಧಾರವಾಡದಲ್ಲಿ ಫೋಟೋ ಶೂಟ್‌ಗೆ ಹೋಗಿದ್ದ ಯುವಕ ಬೈಕ್ ಸ್ಕಿಡ್ ಆಗಿ ಸಾವನ್ನಪ್ಪಿದ್ದಾನೆ.

ಹಾಸನ ಜಿಲ್ಲೆಯ ಅರಸೀಕೆರೆ ತಾಲೂಕಿನ ಚಿಕ್ಕಾರಹಳ್ಳಿ ಗ್ರಾಮದ ಬಳಿಯ ರಾಷ್ಟ್ರೀಯ ಹೆದ್ದಾರಿ 69ರಲ್ಲಿ ಸಂಭವಿಸಿದ ಭೀಕರ ಅಪಘಾತದಲ್ಲಿ ಮೂವರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಕಡೂರು ತಾಲೂಕಿನ ತಂಗ್ಲಿ ಗ್ರಾಮದ ನಿವಾಸಿಗಳಾದ ಶಬ್ಬೀರ್ (55), ತಿಮ್ಮಣ್ಣ (53) ಮತ್ತು ಸಂಜಯ್ (45) ಮೃತಪಟ್ಟ ದುರ್ದೈವಿಗಳು.

**ಘಟನೆಯ ವಿವರ:**

ಅಡಿಕೆ ಕಟಾವು ಮುಗಿಸಿ ಪಿಕಪ್ ವಾಹನದಲ್ಲಿ ಸಾಗಿಸುತ್ತಿದ್ದಾಗ ಚಲಿಸುತ್ತಿದ್ದ ವಾಹನದ ಟೈರ್ ಏಕಾಏಕಿ ಸ್ಫೋಟಗೊಂಡಿದೆ. ಇದರಿಂದ ನಿಯಂತ್ರಣ ತಪ್ಪಿದ ವಾಹನ ಹೆದ್ದಾರಿಯಲ್ಲೇ ಪಲ್ಟಿಯಾಗಿದೆ. ಘಟನೆಯಲ್ಲಿ ಹಾಸನ ಮೂಲದ ನೌಶದ್ ಎಂಬುವವರು ಗಂಭೀರವಾಗಿ ಗಾಯಗೊಂಡಿದ್ದು, ಅವರನ್ನು ಹೆಚ್ಚಿನ ಚಿಕಿತ್ಸೆಗಾಗಿ ಶಿವಮೊಗ್ಗದ ಮೆಗ್ಗಾನ್ ಆಸ್ಪತ್ರೆಗೆ ದಾಖಲಿಸಲಾಗಿದೆ. ಇತರ ಇಬ್ಬರಿಗೆ ಸಣ್ಣಪುಟ್ಟ ಗಾಯಗಳಾಗಿದ್ದು, ಕಡೂರು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಬಾಣಾವರ ಪೊಲೀಸ್ ಠಾಣೆಯಲ್ಲಿ ಈ ಕುರಿತು ಪ್ರಕರಣ ದಾಖಲಾಗಿದೆ. ಧಾರವಾಡದ ಕಲಕೇರಿ ಗ್ರಾಮದಲ್ಲಿ ಹೊಸ ವರ್ಷದ ಅಂಗವಾಗಿ ಫೋಟೋ ಶೂಟ್ ಮಾಡಲು ಹೋಗಿದ್ದ ಯುವಕ ಬೈಕ್ ಸ್ಕಿಡ್ ಆಗಿದ್ದರಿಂದ ಯುವಕ ಸ್ಥಳದಲ್ಲೇ ಸಾವನ್ನಪ್ಪಿದ್ದಾನೆ. ಜನ್ನತ್ ನಗರದ ನಿವಾಸಿ ಮನೀಶ್ ಗುಡಿಸಲಮನಿ ಎಂಬ ಯುವಕ ಮೃತಪಟ್ಟವರಾಗಿದ್ದಾರೆ.

**ನಡೆದಿದ್ದೇನು ?**

ಹೊಸ ವರ್ಷದ ಸಂಭ್ರಮಕ್ಕಾಗಿ ಮನೀಶ್ ತನ್ನ ಸ್ನೇಹಿತರೊಂದಿಗೆ ಕಲಕೇರಿ ಗ್ರಾಮದ ವೀವ್ ಪಾಯಿಂಟ್‌ಗೆ ಫೋಟೋ ಶೂಟ್ ಮಾಡಲು ಬೈಕ್‌ನಲ್ಲಿ ತೆರಳಿದ್ದನು. ವಾಪಸ್ ಮನೆಗೆ ಹಿಂದಿರುಗುವಾಗ ಬೈಕ್ ಸ್ಕಿಡ್ ಆಗಿದೆ. ಇದರಿಂದ ಯುವಕ ಕೆಳಗೆ ಬಿದ್ದಿದಡ್ಡಾನೆ ಇದರ ಪರಿಣಾಮ ಮನೀಶ್ ಸ್ಥಳದಲ್ಲೇ ಸಾವನ್ನಪ್ಪಿದ್ದಾನೆ. ಜೊತೆಯಲ್ಲಿದ್ದ ಮತ್ತೊಬ್ಬ ಯುವಕನ ಸ್ಥಿತಿ ಗಂಭೀರವಾಗಿದ್ದು, ಆಸ್ಪತ್ರೆಯಲ್ಲಿ ಚಿಕಿತ್ಸೆ ಮುಂದುವರಿದಿದೆ. ಧಾರವಾಡ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಇನ್ನೂ ಯುವಕನ ಕುಂಟುಂಬಸ್ಥರ ಆಕ್ರಂಧನ ಮುಗಿಲು ಮುಟ್ಟಿದ್ದು ಯುವರು ತಮ್ಮ ಮೋಜು ಮಸ್ತಿಗೆ ಜೀವ ಕಳೆದುಕೊಳ್ಳುವ ಸ್ಥಿತಿಗೆ ತಲುಪುವುಸು ಬೇಸರದ ಸಂಗತಿಯಾಗಿದೆ ಇನ್ನಾದರೂ ಯುವಕರು ಈ ಬಗ್ಗೆ ಜಾಗರೂಕರಾಗಿರಬೇಕು.

## 10 ವರ್ಷಗಳ ಪ್ರಾರ್ಥನೆಯ ಫಲವಾಗಿ ಜನಿಸಿದ್ದ ನವಜಾತ ಶಿಶು, ಕಲುಷಿತ ನೀರಿನಿಂದ ಸಾವು

**ಭೋಪಾಲ್:** ಭಾರತದ ಅತ್ಯಂತ ಸ್ವಚ್ಛ ನಗರ ಎಂಬ ಹೆಗ್ಗಳಿಕೆಗೆ ಪಾತ್ರವಾಗಿರುವ ಮಧ್ಯಪ್ರದೇಶದ ಇಂದೋರ್‌ನಲ್ಲಿ ಭೀಕರ ದುರಂತವೊಂದು ಸಂಭವಿಸಿದೆ. ನಗರದ ಭಾಗೀರಥಪುರದಲ್ಲಿ ಕಲುಷಿತ ನೀರು ಸೇವನೆಯಿಂದ ಕೇವಲ 6 ತಿಂಗಳ ಹಸುಗೂಸು ಮೃತಪಟ್ಟಿದ್ದು, ಈ ಮೂಲಕ ನೀರಿನ ವಿಷಾಹಾರ ಸೇವನೆಯಿಂದ ಮೃತಪಟ್ಟವರ ಸಂಖ್ಯೆ 13ಕ್ಕೆ ಏರಿಕೆಯಾಗಿದೆ.

10 ವರ್ಷಗಳ ಕಾಯುವಿಕೆಯ ನಂತರ ಸಿಕ್ಕ ಮಗು ಮಸಣಕ್ಕೆ ದಂಪತಿಗೆ ಮದುವೆಯಾಗಿ 10 ವರ್ಷಗಳ ಕಾಲ ಮಕ್ಕಳಾಗಿರಲಿಲ್ಲ. ಹತ್ತು ವರ್ಷಗಳ ನಿರಂತರ ಪ್ರಾರ್ಥನೆ ಮತ್ತು ಹರಕೆಯ ಫಲವಾಗಿ ಈ ಗಂಡು ಮಗು ಜನಿಸಿತ್ತು. ಆದರೆ, ಆ ಮಗುವೂ ಕುಲುಷಿತ ನೀರಿನಿಂದ ಕೇವಲ 6 ತಿಂಗಳಲ್ಲೇ ಸಾವನ್ನಪ್ಪಿದೆ. ಮನೆಗೆ ಪೂರೈಕೆಯಾಗುವ ನಲ್ಲಿಯ ನೀರನ್ನು ಹಾಲಿಗೆ ಬೆರೆಸಿ ಮಗುವಿಗೆ ಕುಡಿಸಿದ್ದೆವು. ತಕ್ಷಣವೇ ಮಗುವಿಗೆ ವಾಂತಿ ಶುರುವಾಗಿ ತೀವ್ರ ಅಸ್ವಸ್ಥಗೊಂಡಿತು. ಸರ್ಕಾರಿ ಆಸ್ಪತ್ರೆಯಿಂದ ಖಾಸಗಿ ಆಸ್ಪತ್ರೆಗೆ ಅಲೆದಾಡಿದರೂ ಮಗುವನ್ನು ಉಳಿಸಿಕೊಳ್ಳಲು ಸಾಧ್ಯವಾಗಲಿಲ್ಲ ಎಂದು ಮಗುವಿನ ತಾಯಿ ಕಣ್ಣೀರು ಹಾಕಿದ್ದಾರೆ. ಅದಲ್ಲದೆ, ಇವರ 10 ವರ್ಷದ ಪುತ್ರಿ ಕೂಡ ಈಗ ಹೊಟ್ಟೆನೋವಿನಿಂದ ಆಸ್ಪತ್ರೆ ಸೇರಿದ್ದಾಳೆ.

ಆಡಳಿತ ಮಂಡಳಿಯ ನಿರ್ಲಕ್ಷ್ಯವೇ ಸಾವಿಗೆ ಕಾರಣ ? ಇಂದೋರ್‌ನ ಭಾಗೀರಥಪುರ ಮತ್ತು ಮರಾಠಿ ಮೊಹಲ್ಲಾದಲ್ಲಿ ಈ ಸಮಸ್ಯೆ ಉಲ್ಬಣಿಸಿದೆ. ಕಳೆದ ಆರು ತಿಂಗಳಿನಿಂದ ನಲ್ಲಿಯಲ್ಲಿ ವಾಸನೆ ಬರುವ ಕೊಳಕು ನೀರು ಬರುತ್ತಿದೆ ಎಂದು ಸ್ಥಳೀಯರು ಅಧಿಕಾರಿಗಳಿಗೆ ದೂರು ನೀಡುತ್ತಲೇ ಬಂದಿದ್ದರು.

ಆದರೆ, ಅಧಿಕಾರಿಗಳ ಉದಾಸೀನತೆ ಇಂದು 13 ಜನರ ಪ್ರಾಣ ಬಲಿ ಪಡೆದಿದೆ. ಸಾವಿರಕ್ಕೂ ಅಧಿಕ ಜನರು ಹೊಟ್ಟೆನೋವು, ವಾಂತಿ, ಬೇಧಿಯಿಂದ ಬಳಲುತ್ತಿದ್ದು, 200ಕ್ಕೂ ಹೆಚ್ಚು ಮಂದಿ ವಿವಿಧ ಆಸ್ಪತ್ರೆಗಳಲ್ಲಿ ಸಾವು-ಬದುಕಿನ ನಡುವೆ ಹೋರಾಡುತ್ತಿದ್ದಾರೆ. ಪ್ರಾಥಮಿಕ ತನಿಖೆಯ ಪ್ರಕಾರ, ನರ್ಮದಾ ನದಿಯಿಂದ ನೀರು ಪೂರೈಸುವ ಮುಖ್ಯ ಪೈಪ್‌ಲೈನ್ ಒಂದು ಸಾರ್ವಜನಿಕ ಶೌಚಾಲಯದ ಅಡಿಯಿಂದ ಹಾದು ಹೋಗುತ್ತದೆ. ಈ ಪೈಪ್ ಲೈ ನ್ಸೋ ರಿಕೆಯಾಗುತ್ತಿ ರುವುದರಿಂದ ಶೌಚಾಲಯದ ಮಲಿನ ನೀರು ಕುಡಿಯುವ ನೀರಿನೊಂದಿಗೆ ಬೆರೆತು ಮನೆಗಳಿಗೆ ಪೂರೈಕೆಯಾಗುತ್ತಿದೆ. ಹೊಸ ಪೈಪ್‌ಲೈನ್ ಅಳವಡಿಸಲು 2.5 ಕೋಟಿ ರೂ.ಗಳ ಟೆಂಡರ್ ನಾಲ್ಕು ತಿಂಗಳ ಹಿಂದೆಯೇ ಅನುಮೋದನೆಯಾಗಿದ್ದರೂ, ಕಾಮಗಾರಿ ಮಾತ್ರ ಶುರುವಾಗಿರಲಿಲ್ಲ.

ಘಟನೆಯನ್ನು ಗಂಭೀರವಾಗಿ ಪರಿಗಣಿಸಿರುವ ಮುಖ್ಯಮಂತ್ರಿ ಮೋಹನ್ ಯಾದವ್, ಮುನ್ಸಿಪಲ್ ಕಾರ್ಪೊರೇಷನ್ ವಲಯ ಅಧಿಕಾರಿ ಮತ್ತು ಸಹಾಯಕ ಎಂಜಿನಿಯರ್‌ನನ್ನು ತಕ್ಷಣದಿಂದ ಜಾರಿಗೆ ಬರುವಂತೆ ಅಮಾನತುಗೊಳಿಸಿದ್ದಾರೆ. ಮೃತರ ಕುಟುಂಬಕ್ಕೆ ತಲಾ 2 ಲಕ್ಷ ರೂ. ಪರಿಹಾರ ಘೋಷಿಸಲಾಗಿದೆ. ಸದ್ಯ ಪರಿಸ್ಥಿತಿ ನಿಯಂತ್ರಿಸಲು ಟ್ಯಾಂಕರ್‌ಗಳ ಮೂಲಕ ಕುಡಿಯುವ ನೀರು ಪೂರೈಸಲಾಗುತ್ತಿದೆ.

## ಬೆಲೆಯೇರಿಕೆ ವಿರುದ್ಧ ಇರಾನ್‌ನಲ್ಲಿ ಜನಾಕ್ರೋಶ: ಏಳು ಮಂದಿ ಸಾವು



**ಟೆಹ್ರಾನ್:** ಆರ್ಥಿಕ ಕುಸಿತ, ಗಗನಕ್ಕೇರಿರುವ ನಿರುದ್ಯೋಗ ಮತ್ತು ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ಕಂಗೆಟ್ಟಿರುವ ಇರಾನಿನ ಜನತೆ ಬೀದಿಗಿಳಿದು ಹೋರಾಟ ನಡೆಸುತ್ತಿದ್ದಾರೆ. ಭಾನುವಾರದಿಂದ ಆರಂಭವಾದ ಈ ಪ್ರತಿಭಟನೆಯಲ್ಲಿ ಭದ್ರತಾ ಪಡೆಗಳು ಮತ್ತು ಪ್ರತಿಭಟನಾಕಾರರ ನಡುವೆ ನಡೆದ ಸಂಘರ್ಷದಲ್ಲಿ ಈವರೆಗೆ ಕನಿಷ್ಠ ಏಳು ಮಂದಿ ಸಾವನ್ನಪ್ಪಿದ್ದಾರೆ ಎಂದು ವರದಿಯಾಗಿದೆ.

ರಾಜಧಾನಿ ಟೆಹ್ರಾನ್‌ನ ಮಾರುಕಟ್ಟೆಗಳಲ್ಲಿ ಆರಂಭವಾದ ಈ ಪ್ರತಿಭಟನೆ ಈಗ ಇಡೀ ದೇಶಕ್ಕೆ ವ್ಯಾಪಿಸಿದೆ. ಮಂಗಳವಾರ ಕನಿಷ್ಠ ಹತ್ತು ವಿಶ್ವವಿದ್ಯಾಲಯಗಳ ವಿದ್ಯಾರ್ಥಿಗಳು ಈ ಹೋರಾಟಕ್ಕೆ ಕೈಜೋಡಿಸುವುದರೊಂದಿಗೆ ಪ್ರತಿಭಟನೆಯ ಕಾವು ತೀವ್ರಗೊಂಡಿದೆ. ವ್ಯಾಪಾರಿಗಳು ತಮ್ಮ ಅಂಗಡಿ-ಮುಂಗಟ್ಟುಗಳನ್ನು ಬಂದ್ ಮಾಡಿ ಪ್ರತಿಭಟನೆಗೆ ಬೆಂಬಲ ಸೂಚಿಸಿದ್ದಾರೆ. ಬುಧವಾರ ತೀವ್ರ ಚಳಿಯ ಹಿನ್ನೆಲೆಯಲ್ಲಿ ಸರ್ಕಾರ ರಜೆ ಘೋಷಿಸಿದ್ದರೂ, ಪ್ರತಿಭಟನಾಕಾರರ ಆಕ್ರೋಶ ಕಡಿಮೆಯಾಗಿಲ್ಲ. ಬೆಲೆಯೇರಿಕೆ: ಡಿಸೆಂಬರ್‌ನಲ್ಲಿ ಹಣದುಬ್ಬರ ಪ್ರಮಾಣವು ಅಧಿಕೃತವಾಗಿ 42.5 ಶೇಕಡಕ್ಕೆ ಏರಿಕೆಯಾಗಿದೆ. ಇದು ಸಾಮಾನ್ಯ ಜನರ ಜೀವನೋಪಾಯವನ್ನು ದುಸ್ತರಗೊಳಿಸಿದೆ.

ಕರೆನ್ಸಿ ಮೌಲ್ಯ ಕುಸಿತ: ಇರಾನ್‌ನ ಕರೆನ್ಸಿ 'ರಿಯಾಲ್' ಪಾತಾಳಕ್ಕೆ ಕುಸಿದಿದೆ. ಪ್ರಸ್ತುತ ಒಂದು ಅಮೆರಿಕನ್ ಡಾಲರ್‌ಗೆ ಸುಮಾರು 14 ಲಕ್ಷ ರಿಯಾಲ್ ಮೌಲ್ಯವಿದೆ. ಅಂತರಾಷ್ಟ್ರೀಯ ನಿರ್ಬಂಧಗಳು: ಪರಮಾಣು ಕಾರ್ಯಕ್ರಮದ ಹಿನ್ನೆಲೆಯಲ್ಲಿ ಅಮೆರಿಕಾ ಮತ್ತು ಪಾಶ್ಚಾತ್ಯ ರಾಷ್ಟ್ರಗಳು ಹೇರಿರುವ ನಿರ್ಬಂಧಗಳು ಇರಾನ್‌ನ ಬೆನ್ನೆಲುಬನ್ನೇ ಮುರಿದಿವೆ. ಜೊತೆಗೆ ಜೂನ್‌ನಲ್ಲಿ ಇಸ್ರೇಲ್‌ನೊಂದಿಗೆ ನಡೆದ 12 ದಿನಗಳ ಯುದ್ಧವು ಸರ್ಕಾರದ ಖಜಾನೆಯನ್ನು ಮತ್ತಷ್ಟು ಬರಿದು ಮಾಡಿದೆ.

ಈ ಬಾರಿಯ ಪ್ರತಿಭಟನೆಗಳು ಆರ್ಥಿಕ ಕಾರಣಗಳಿಗಾಗಿ ನಡೆಯುತ್ತಿದ್ದರೂ, ಕೆಲವು ಕಡೆಗಳಲ್ಲಿ ಧಾರ್ಮಿಕ ಆಡಳಿತದ ವಿರುದ್ಧ ಘೋಷಣೆಗಳು ಕೇಳಿಬರುತ್ತಿವೆ. 2022ರಲ್ಲಿ ಮಹ್ಸಾ ಅಮಿನಿ ಎಂಬ ಯುವತಿ ಹಿಜಾಬ್ ನಿಯಮ ಉಲ್ಲಂಘಿಸಿದ ಆರೋಪದಲ್ಲಿ ಬಂಧನಕ್ಕೊಳಗಾಗಿ ಸಾವನ್ನಪ್ಪಿದಾಗ ಇಡೀ ಇರಾನ್ ಹೊತ್ತಿ ಉರಿದಿತ್ತು.

ಅಗಿನ ಪ್ರತಿಭಟನೆಗೆ ಹೋಲಿಸಿದರೆ ಈಗಿನದ್ದು ಸಣ್ಣ ಪ್ರಮಾಣದಲ್ಲಿದ್ದರೂ, ಆರ್ಥಿಕ ಸಂಕಷ್ಟವು ಜನರನ್ನು ದೀರ್ಘಕಾಲದವರೆಗೆ ಬೀದಿಯಲ್ಲಿ ಉಳಿಯುವಂತೆ ಮಾಡುವ ಆತಂಕ ಮೂಡಿಸಿದೆ.

ಇರಾನ್ ಅಧ್ಯಕ್ಷ ಮಸೂದ್ ಪೆಜೆಶ್ಕಿಯನ್ ಪ್ರತಿಭಟನಾಕಾರರೊಂದಿಗೆ ಸಂವಾದ ನಡೆಸಲು ಸಿದ್ಧವೆಂದು ಘೋಷಿಸಿದ್ದಾರೆ. ಜನರ ಜೀವನೋಪಾಯದ ಸಮಸ್ಯೆಗಳನ್ನು ಬಗೆಹರಿಸದಿದ್ದರೆ ಆಡಳಿತಗಾರರಿಗೆ ಉಳಿಗಾಲವಿಲ್ಲ ಎಂದು ಅವರು ಹೇಳಿದ್ದಾರೆ. ಆದರೆ, ಕುಸಿಯುತ್ತಿರುವ ಕರೆನ್ಸಿ ಮೌಲ್ಯದ ಮುಂದೆ ಸರ್ಕಾರದ ಆಯ್ಕೆಗಳು ಬಹಳ ಸೀಮಿತವಾಗಿವೆ. ಇರಾನ್‌ನ ಫಾರ್ಸ್ ಸುದ್ದಿ ಸಂಸ್ಥೆಯ ಪ್ರಕಾರ, ಹಿಂಸಾಚಾರಕ್ಕೆ ಪ್ರಚೋದನೆ ನೀಡಿದ ಹಲವರನ್ನು ಈಗಾಗಲೇ ಪೊಲೀಸರು ಬಂಧಿಸಿದ್ದಾರೆ.

ಸುದ್ದಿ ಹಾಗೂ ಜಾಹೀರಾತುಗಳಿಗೆ ಸಂಪರ್ಕಿಸಿ :9538786812/988065534

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.